# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –257 | ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:06–05–2025 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 257 | RNI No: KARKAN/2023/88462 | KA/SK/CTA-874/2024-2026 | Chitradurga | Date: 06-05-2025 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಪಾಕ್ ಪ್ರಜೆಗಳನ್ನು ಹುಡುಕಿ ಹೊರ ಹಾಕಿ: ಸಂಸದ ಗೋವಿಂದ ಕಾರಜೋಳ 2

ನಗರದ ಸರ್ವತೋಮುಖ ಅಭಿವೃದ್ಧಿಗೆ ಪ್ರಾಮಾಣಿಕ ಯತ್ನ: ಕವಿತಾಬೋರಯ್ಯ 3

ಶಾರದಾಶ್ರಮ: ದೇವರ ಎತ್ತುಗಳಿಗೆ ಉಚಿತ ಮೇವು ವಿತರಿಸಿ ಬಸವ ಜಯಂತಿ ಆಚರಣೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಮೈಸೂರಿನ ಸಿಎಸ್‌ಐಆರ್–ಕೇಂದ್ರಿಯ ಆಹಾರ ತಂತ್ರಜ್ಞಾನಸಂಶೋಧನಾಲಯದಲ್ಲಿಜೂನಿಯರ್ ಸೆಕ್ರೆಟರಿಯೇಟ್ ಸಹಾಯಕ, ಜೂನಿಯರ್ ಸ್ಟೆನೋಗ್ರಾಫರ್ ಮತ್ತು ತಾಂತ್ರಿಕ ಸಹಾಯಕ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಮೇ 07 ಅರ್ಜಿ ಸಲ್ಲಿಸಲು ಕೊನೆಯ ದಿನ. ಜೂನಿಯರ್ ಸೆಕ್ರೆಟರಿಯೇಟ್ ಸಹಾಯಕ, ಜೂನಿಯರ್ ಸ್ಟೆನೋಗ್ರಾಫರ್ ಹುದ್ದೆಗಳಿಗೆ ಪಿಯುಸಿ ತತ್ಸಮಾನ ಮತ್ತು ಸ್ಟೇನೋ ಕನ್ನಡ ಮತ್ತು ಇಂಗ್ಲಿಷ್ ಸಿನಿಯರ್ ವೇಗವಾಗಿ ಟೈಪಿಂಗ್, ಕಂಪ್ಯೂಟರ್ ಜ್ಞಾನ ತಾಂತ್ರಿಕ ಸಹಾಯಕ ಹುದ್ದೆಗೆ ಬಿಎಸ್ಸಿ, ಡಿಪ್ಲೊಮಾದಲ್ಲಿ ಕಂಪ್ಯೂಟರ್ ಸೈನ್ಸ್ ವಿದ್ಯಾರ್ಹತೆ ಹೊಂದಿರಬೇಕು. ಅರ್ಜಿಯ ಸಲ್ಲಿಸಲು 18 ರಿಂದ 28 ವರ್ಷ ವಯೋಮಿತಿ ಒಳಗೆ ಇರಬೇಕು. ಅರ್ಜಿಯ ಜೊತೆಗೆ ಅಂಕಪಟ್ಟಿಗಳು, ಜಾತಿ ಪ್ರಮಾಣ ಪತ್ರ, ಅಂಗವಿಕಲರ ಪ್ರಮಾಣ ಪತ್ರ, ಆರ್ಮಡ್ ಪರ್ಸನಲ್ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಮತ್ತು ಒಂದು ವರ್ಷದ ಕಂಪ್ಯೂಟರ್ ಪ್ರಮಾಣ ಪತ್ರ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು https://cftri.res.in, https://recruitment.cftri.res.in ಈ ವೆಬ್‌ಸೈಟ್‌ಗೆ ಭೇಟಿ ನೀಡಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಚಿತ್ರದುರ್ಗ ದೂರವಾಣಿ ಸಂಖ್ಯೆ 9945587060,7022459064, 7019755147 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

### ಮೇ 12ರಿಂದ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ

» **ಚಿತ್ರದುರ್ಗ**

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ವತಿಯಿಂದ ನಗರದ ಪ್ರಧಾನ ಅಂಚೆ ಕಚೇರಿ ಪಕ್ಕದ ಪಶುಆಸ್ಪತ್ರೆ ಆವರಣದಲ್ಲಿರುವ ಪಶುಪಾಲನ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಇದೇ ಮೇ 12 ರಿಂದ 13 ರವರೆಗೆ "ಕುರಿ ಮತ್ತು ಮೇಕೆ ಸಾಕಾಣಿಕೆ ವೈಜ್ಞಾನಿಕ ತರಬೇತಿ" ಹಮ್ಮಿಕೊಳ್ಳಲಾಗಿದೆ. ಈ ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ನೀಡಲಾಗುವುದಿಲ್ಲ. ತರಬೇತಿಗೆ ಹಾಜರಾಗುವ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 3 ಪಾಸ್‌ಪೋರ್ಟ್ ಸೈಜ್ ಪೋಟೋ, ಬ್ಯಾಂಕ್ ಪಾಸ್ ಬುಕ್ ಪ್ರತಿ ತರಬೇಕು. ಪರಿಶಿಷ್ಟ ಜಾತಿ, ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರ ತರಬೇಕು. ತರಬೇತಿ ನೀಡಲು 25 ಜನರ ಗುರಿ ನಿಗಧಿಪಡಿಸಲಾಗಿದೆ. ಹೆಚ್ಚಿನ ವಿವರಕ್ಕಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ಚಿತ್ರದುರ್ಗ ಅವರ ದೂರವಾಣಿ ಸಂಖ್ಯೆ 9482943111, 9886002248, 9886803637 ಗೆ ಸಂಪರ್ಕಿಸಲು ಕೋರಿದೆ. ತರಬೇತಿಯಲ್ಲಿ ಭಾಗವಹಿಸಲು ಇಚ್ಚಿಸುವ ರೈತರು ಮುಂಚಿತವಾಗಿ ವಾಟ್ಸಪ್ ಮೂಲಕ ತಮ್ಮ ಹೆಸರು ಮತ್ತು ಮೊಬೈಲ್ ಸಂಖ್ಯೆಯೊಂದಿಗೆ ನೊಂದಾವಣೆ ಮಾಡಿಕೊಳ್ಳಬೇಕು ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದ ಮುಖ್ಯ ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

### ಕುವೆಂಪು ಆಂಗ್ಲ ಶಾಲೆ ಎಸ್‌ಎಸ್‌ಎಲ್‌ಸಿಯಲ್ಲಿ ಶೇ.96.55ರಷ್ಟು ಫಲಿತಾಂಶ

» **ಚಳ್ಳಕೆರೆ**

ನಗರದ ಕುವೆಂಪು ಆಂಗ್ಲಮಾಧ್ಯಮ ಶಾಲೆ ಪ್ರಸ್ತುತ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.96.55ರಷ್ಟು ಸಾಧನೆ ದಾಖಲಿಸಿದೆ ಎಂದು ಶಾಲೆಯ ಆಡಳಿತಾಧಿಕಾರಿ ಎನ್.ತಿಪ್ಪೇಸ್ವಾಮಿ ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿ, ಶಾಲೆಯ ಒಟ್ಟು 58 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು ಆ ಪೈಕಿ 56 ವಿದ್ಯಾರ್ಥಿಗಳ ಉತ್ತೀರ್ಣರಾಗಿರುತ್ತಾರೆ. ಉನ್ನತಶ್ರೇಣಿ–19, ಪ್ರಥಮ ದರ್ಜೆ–30 ದ್ವಿತೀಯ ದರ್ಜೆ 7 ಉತ್ತೀರ್ಣರಾಗಿದ್ದು, ಎಂ.ಮೌನೇಶ–625ಕ್ಕೆ 606 ಅಂಕ ಪಡೆದು ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾನೆ. ಕೆ.ಶರತ್‌ಚಂದ್ರ–625ಕ್ಕೆ 605, ಎಂ.ದಿವ್ಯಶ್ರೀ–625ಕ್ಕೆ 600 ಅಂಕ ಪಡೆದಿದ್ದು ಶಾಲೆಯ ಆಡಳಿತಮಂಡಳಿ ಹಾಗೂ ಶಿಕ್ಷಕರು ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

**ಒಳ ಮೀಸಲಾತಿ ಜಾತಿ ಗಣತಿ ಸಮೀಕ್ಷೆ ಕಾರ್ಯ: ದತ್ತಾಂಶ ಸಂಗ್ರಹ ಆರಂಭ**

# ಪರಿಶಿಷ್ಟ ಜಾತಿಗಳ ಸಮೀಕ್ಷೆ–2025ಕ್ಕೆ ಚಾಲನೆ

» **ಚಿತ್ರದುರ್ಗ**

ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಕುರಿತು ನ್ಯಾಯಮೂರ್ತಿ ಡಾ.ಹೆಚ್.ಎನ್.ನಾಗಮೋಹನದಾಸ್ ಅವರ ಏಕ ಸದಸ್ಯ ವಿಚಾರಣಾ ಆಯೋಗವನ್ನು ಸರ್ಕಾರ ರಚಿಸಿದ್ದು, ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಸಂಬಂಧದ ವಿವಿಧ ಅಂಶಗಳ ಬಗ್ಗೆ ದತ್ತಾಂಶ ಸಂಗ್ರಹಣೆಗಾಗಿ ಸಮೀಕ್ಷೆ ಕಾರ್ಯಕ್ಕೆ ಸೋಮವಾರ ಚಿತ್ರದುರ್ಗದ ಗಾಂಧಿನಗರದಲ್ಲಿ ವಿದ್ಯುಕ್ತವಾಗಿ ಚಾಲನೆ ದೊರೆಯಿತು.

ನಗರದ ಐಯುಡಿಪಿ ಬಡಾವಣೆ ಸಮೀಪದ ಗಾಂಧಿ ನಗರದಲ್ಲಿ ಸೋಮವಾರ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ–2025ಕ್ಕೆ ಜಿಲ್ಲಾಧಿಕಾರಿ ಟಿ. ವೆಂಕಟೇಶ್, ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ. ಸೋಮಶೇಖರ್ ಅವರು ಮಾಜಿ ಸಚಿವ ಹೆಚ್. ಆಂಜನೇಯ ಹಾಗೂ ವಿವಿಧ ಮುಖಂಡರುಗಳ ಉಪಸ್ಥಿತಿಯಲ್ಲಿ ಚಾಲನೆ ನೀಡಿದರು.

ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ ಕುರಿತಂತೆ ಮಾಹಿತಿ ನೀಡಿದ ಜಿಲ್ಲಾಧಿಕಾರಿಗಳು, ಸಮಾನತೆ ಮತ್ತು ಸಾಮಾಜಿಕ ನ್ಯಾಯ ಎಲ್ಲಾ ವರ್ಗದವರಿಗೆ ಎಲ್ಲಾ ಕಾಲದಲ್ಲಿಯೂ ನೀಡುವುದು ಸರ್ಕಾರದ ಅತಿ ದೊಡ್ಡ ಆಕಾಂಕ್ಷೆಯಾಗಿದೆ. ಈ ಸಮಾನತೆಯ ಪರಿಕಲ್ಪನೆ ಅನೇಕ ಶ್ರೇಷ್ಠ ಚಿಂತನಶೀಲರು ಮತ್ತು ದಾರ್ಶನಿಕರಿಂದ ಸ್ಫೂರ್ತಿ ಪಡೆದಿದೆ. ಇವರಿಂದ ಪ್ರತಿಪಾದಿಸಲ್ಪಟ್ಟ ಸಮಾನತೆಯ ತತ್ವವೆಂದರೆ ಎಲ್ಲಾ ನಾಗರೀಕರಿಗೆ ಸಮಾನ ಸ್ಥಾನಮಾನ ಹಾಗೂ ಅವಕಾಶ ನೀಡುವುದಾಗಿದೆ. ಭಾರತದ ಸಂವಿಧಾನದ 15ನೇ ಪರಿಚ್ಛೇದವು ಮತ್ತು ಕುಲ, ಜಾತಿ, ಲಿಂಗ ಮತ್ತು ಜನ್ಮ ಸ್ಥಳಗಳ ಆಧಾರದ ಮೇಲೆ ಯಾವುದೇ ತಾರತಮ್ಯ ಮಾಡುವುದನ್ನು ನಿಷೇಧಿಸುತ್ತದೆ. ಅದೇ ರೀತಿ ಪರಿಚ್ಛೇದ 16ರಲ್ಲಿ ಎಲ್ಲರಿಗೂ ಸಾರ್ವತ್ರಿಕ ಉದ್ಯೋಗ ವಲಯದಲ್ಲಿ ಸರಿಸಮಾನ ಅವಕಾಶಗಳ ಒದಗಿಸಲು ಅನುವು ಮಾಡಿಕೊಡಲಾಗಿದೆ. ವಿಭಿನ್ನ ಸ್ಥಳಗಳಲ್ಲಿ ವಾಸವಾಗಿರುವ ಅಥವಾ ವಿಭಿನ್ನ ವೃತ್ತಿಗಳಲ್ಲಿ ತೊಡಗಿರುವ ವ್ಯಕ್ತಿಗಳು ಹಾಗೂ ಜನ ಸಮೂಹಗಳಿಗೆ ಸಾಮಾಜಿಕ ಮತ್ತು ಆರ್ಥಿಕ ಅಸಮಾನತೆಯನ್ನು ಕಡಿಮೆ ಮಾಡಲು ಮತ್ತು ಸ್ಥಾನಮಾನ ಸೌಲಭ್ಯ ಹಾಗೂ ಅವಕಾಶಗಳಲ್ಲಿ ತಾರತಮ್ಯವನ್ನು ತೊಡೆದು ಹಾಕಲು ಕಾರ್ಯಕ್ರಮ ರೂಪಿಸುವುದಕ್ಕಾಗಿ ಸಾಮಾಜಿಕ ಸ್ಥಿತಿಗತಿಗಳ ಅಧ್ಯಯನ ಮಾಡಬೇಕಾಗಿರುತ್ತದೆ. ಈ ನಿಟ್ಟಿನಲ್ಲಿ ಸರ್ವೋಚ್ಚ ನ್ಯಾಯಾಲಯವು ಪರಿಶಿಷ್ಟ ಜಾತಿಗಳಿಗೆ ಒಳಮೀಸಲಾತಿ ನೀಡಲು ರಾಜ್ಯ ಸರ್ಕಾರಗಳಿಗೆ ಅಧಿಕಾರ ಇದೆ ಎಂದು ತೀರ್ಪು ನೀಡಿರುತ್ತದೆ.



ಪರಿಶಿಷ್ಟ ಜಾತಿಯ ಪಟ್ಟಿಯಲ್ಲಿ ಇರುವ ಜಾತಿಗಳನ್ನು ಉಪ ವರ್ಗೀಕರಣ ಮಾಡಿ ಒಳ ಮೀಸಲಾತಿಯನ್ನು ನೀಡಬಹುದು ಎಂದು 2024ರ ಆಗಸ್ಟ್ 01ರಂದು ತೀರ್ಪು ನೀಡಿದೆ. ಕರ್ನಾಟಕ ಸರ್ಕಾರವು ಒಳಮೀಸಲಾತಿಯನ್ನು ಜಾರಿಮಾಡಲು ನ್ಯಾಯಮೂರ್ತಿ ಹೆಚ್. ಎನ್.ನಾಗಮೋಹನ್ ದಾಸ್ ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಏಕ ವ್ಯಕ್ತಿ ವಿಚಾರಣಾ ಆಯೋಗವನ್ನು ನೇಮಿಸಿ ಒಳ ಮೀಸಲಾತಿಯನ್ನು ವರ್ಗೀಕರಿಸಲು ಸೂಚಿಸಿರುವ ಹಿನ್ನೆಲೆಯಲ್ಲಿ ಉಪ ವರ್ಗೀಕರಣ ಕೈಗೊಳ್ಳಲು ಅವಶ್ಯವಿರುವ ದತ್ತಾಂಶಗಳನ್ನು ಸಂಗ್ರಹಿಸಲು ಸಮೀಕ್ಷೆಯನ್ನು ಕೈಗೊಳ್ಳಲು ಉದ್ದೇಶಿಸಿರುತ್ತದೆ ಎಂದು ಮಾಹಿತಿ ನೀಡಿದರು.

ಮಾಜಿ ಸಚಿವ ಹೆಚ್.ಆಂಜನೇಯ ಮಾತನಾಡಿ, ಪರಿಶಿಷ್ಟ ಜಾತಿಯ ಪಟ್ಟಿಗೆ ಸೇರಿರುವ ಜನರ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ರಾಜಕೀಯ, ಔದ್ಯೋಗಿಕ ಪ್ರಾತಿನಿಧ್ಯತೆ ಇತ್ಯಾದಿ ಸ್ಥಿತಿಗತಿಗಳ ಬಗ್ಗೆ ಸಮೀಕ್ಷೆ ಮಾಡುವುದು ನ್ಯಾಯಮೂರ್ತಿ ಡಾ.ಹೆಚ್.ಎಸ್.ನಾಗಮೋಹನ್‌ದಾಸ್ ಏಕ ಸದಸ್ಯ ವಿಚಾರಣಾ ಆಯೋಗದ ಉದ್ದೇಶವಾಗಿದ್ದು, ಪರಿಶಿಷ್ಟ ಜಾತಿಗಳ ಸ್ಥಿತಿಗತಿಗಳ ಬಗ್ಗೆ ವೈಜ್ಞಾನಿಕವಾಗಿ ಮತ್ತು ವಾಸ್ತವಿಕ ಮಾಹಿತಿ ಪಡೆದುಕೊಂಡು ಒಳ ಮೀಸಲಾತಿಯನ್ನು ವರ್ಗೀಕರಿಸಿ ಸರ್ಕಾರಕ್ಕೆ ಶಿಫಾರಸ್ಸು ಮಾಡುವುದಾಗಿರುತ್ತದೆ.

### ಒಳ ಮೀಸಲಾತಿ ಜಾತಿ ಗಣತಿಗೆ 1,825 ಶಿಕ್ಷಕರ ನಿಯೋಜನೆ

ರಾಜ್ಯ ಸರ್ಕಾರವು ಅಭಿವೃದ್ಧಿ ಪಡಿಸಿರುವ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ–2025ರ ಮೊಬೈಲ್ ಆ್ಯಪ್ ಮೂಲಕ ದತ್ತಾಂಶ ಸಂಗ್ರಹಿಸಲಾಗುವುದು. ಸಮೀಕ್ಷಾ ಕಾರ್ಯ ಕೈಗೊಳ್ಳಲು ಜಿಲ್ಲಾ ಮಟ್ಟದಲ್ಲಿ 3 ಮಾಸ್ಟರ್ ಟ್ರೈನರ್ಸ್‌ಗಳನ್ನು ಹಾಗೂ ತಾಲ್ಲೂಕು ಮಟ್ಟದಲ್ಲಿ ಪ್ರತಿ ತಾಲ್ಲೂಕಿನಿಂದ 5 ರಂತೆ ಒಟ್ಟು 30 ತಾಲ್ಲೂಕು ಮಾಸ್ಟರ್ಸ್ ಟ್ರೈನರ್ಸ್‌ಗಳು, 1,661 ಗಣತೀದಾರರು, 164 ಮೇಲ್ವಿಚಾರಕರು ಸೇರಿದಂತೆ ಒಟ್ಟು 1,825 ಶಿಕ್ಷಕರನ್ನು ಶಿಕ್ಷಣ ಇಲಾಖೆಯಿಂದ ನಿಯೋಜಿಸಲಾಗಿದೆ ಅಲ್ಲದೆ, ಸಮಗ್ರ ಮೇಲ್ವಿಚಾರಣೆಗೆ ತಾಲ್ಲೂಕಿಗೆ ಒಬ್ಬರಂತೆ ಜಿಲ್ಲಾ ಮಟ್ಟದ 6 ನೋಡೆಲ್ ಅಧಿಕಾರಿಗಳನ್ನು ನಿಯೋಜಿಸಲಾಗಿದೆ.

ಸಮೀಕ್ಷೆಯಿಂದ ಹೊರಹೊಮ್ಮಿದ ಅಂಶಗಳ ಆಧಾರದಲ್ಲಿ ಅಂತಹ ಸಮುದಾಯಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಾನಮಾನವನ್ನು ಅಧ್ಯಯನ ಮಾಡಿ ಒಳ ಮೀಸಲಾತಿ ವರ್ಗೀಕರಣವನ್ನು ಮಾಡುವುದಕ್ಕಾಗಿ ಎಲ್ಲಾ ಪರಿಶಿಷ್ಟ ಜಾತಿಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಯ ಕುರಿತು ಮನೆ–ಮನೆಗೆ ಭೇಟಿ ನೀಡಿ ಸಮೀಕ್ಷೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ. ಒಳ ಮೀಸಲಾತಿ ಜಾರಿ ಸಂಬಂಧ ಮನೆ ಮನೆಗೆ ಭೇಟಿ ನೀಡುವ ಗಣತಿದಾರರಿಗೆ ಸೂಕ್ತ ರೀತಿಯಲ್ಲಿ ಮಾಹಿತಿ ನೀಡಿ, ಅಗತ್ಯ ಸಹಕಾರ ನೀಡುವ ಮೂಲಕ ಸಮೀಕ್ಷಾ ಕಾರ್ಯ ಯಶಸ್ವಿಗೊಳಿಸಿ, ಒಳ ಮೀಸಲಾತಿಯ ಹಂಚಿಕೆಗೆ ಸಹಕರಿಸಬೇಕು ಎಂದು ಪರಿಶಿಷ್ಟ ಜಾತಿಯ ಎಲ್ಲ ಸಮುದಾಯದವರಿಗೆ ಮನವಿ ಮಾಡಿದರು.

**ಮೂರು ಹಂತಗಳಲ್ಲಿ ಪರಿಶಿಷ್ಟ ಜಾತಿ ಕುಟುಂಬಗಳ ಸಮೀಕ್ಷೆ:** ಪರಿಶಿಷ್ಟ ಜಾತಿ ಒಳ ಮೀಸಲಾತಿ ಜಾರಿ ಸಂಬಂಧ ಪರಿಶಿಷ್ಟ ಜಾತಿ ಕುಟುಂಬಗಳ ಸಮೀಕ್ಷೆ ಆರಂಭಗೊಂಡಿದ್ದು, ಈ ಸಮೀಕ್ಷೆಯು ಮೂರು ಹಂತಗಳಲ್ಲಿ ನಡೆಯಲಿದೆ.

ಮೇ 05 ರಿಂದ 17 ರವರೆಗೆ ನಡೆಯುವ ಮೊದಲ ಹಂತದ ಸಮೀಕ್ಷೆಯಲ್ಲಿ ಮನೆ–ಮನೆ ಭೇಟಿ ನೀಡಿ, ಮೇ 19 ರಿಂದ 21 ರವರೆಗೆ ನಡೆಯುವ ಎರಡನೇ ಹಂತ ಸಮೀಕ್ಷೆ ಬ್ಲಾಕ್‌ಗಳಲ್ಲಿ ವಿಶೇಷ ಶಿಬಿರಗಳನ್ನು ಕೈಗೊಂಡು, ಮನೆ ಭೇಟಿಯಲ್ಲಿ ಬಿಟ್ಟುಹೋದ ಪರಿಶಿಷ್ಟ ಜಾತಿ ಕುಟುಂಬಗಳ ಮಾಹಿತಿಯನ್ನು ಸಂಗ್ರಹಿಸುವುದು. ಮೂರನೇ ಹಂತ ಮೇ 19 ರಿಂದ 21 ರವರೆಗೆ ಸ್ವಯಂ ಘೋಷಣೆ (ಆನ್‌ಲೈನ್ ಮೂಲಕ) ಸಮೀಕ್ಷೆಗೆ ಮಾಹಿತಿ ಒದಗಿಸಬಹುದಾಗಿದೆ.

ಸಮೀಕ್ಷಾ ಕಾರ್ಯದ ಪೂರ್ವಭಾವಿಯಾಗಿರಾಜ್ಯಮಟ್ಟದಲ್ಲಿನಡೆದತರಬೇತಿಗೆ ಚಿತ್ರದುರ್ಗ ಜಿಲ್ಲಾ ಹಂತದಿಂದ 03 ಮಾಸ್ಟರ್ ಟ್ರೈನರ್‌ಗಳನ್ನು ನಿಯೋಜಿಸಲಾಗಿದ್ದು, ಮಾಸ್ಟರ್ ಟ್ರೈನರ್‌ಗಳು 2025ರ ಏಪ್ರಿಲ್ 25ರಂದು ಬೆಂಗಳೂರಿನಲ್ಲಿ ನಡೆದ ತರಬೇತಿಯಲ್ಲಿ ಭಾಗವಹಿಸಿ, ಸಮೀಕ್ಷಾ ಕಾರ್ಯಗಳ ಸಂಪೂರ್ಣ ಮಾಹಿತಿ ಪಡೆದುಕೊಂಡಿದ್ದಾರೆ. ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಸಮನ್ವಯ ಸಮಿತಿಯ ನೇತೃತ್ವದಲ್ಲಿ ಸಮೀಕ್ಷೆ ದತ್ತಾಂಶ ಸಂಗ್ರಹಿಸುವ ಕುರಿತು ಈಗಾಗಲೇ ತರಬೇತಿಯನ್ನು ಪಡೆದ ಜಿಲ್ಲಾ ಮಟ್ಟದ ಮಾಸ್ಟರ್ಸ್ ಟ್ರೈನರ್ಸ್‌ಗಳಿಂದ ತಾಲ್ಲೂಕು ಮಟ್ಟದ ಮಾಸ್ಟರ್ಸ್ ಟ್ರೈನರ್ಸ್‌ಗಳಿಗೆ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯಲ್ಲಿ 2025ರ ಏಪ್ರಿಲ್ 28ರಂದು ತರಬೇತಿ ನೀಡಲಾಗಿದೆ. ಆಯಾ ತಾಲ್ಲೂಕಿನ ತಹಶೀಲ್ದಾರ್ ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳನ್ನೊಳಗೊಂಡ ತಾಲ್ಲೂಕು ಸಮನ್ವಯ ಸಮಿತಿಯ ನೇತೃತ್ವದಲ್ಲಿ ಸಮೀಕ್ಷೆ ದತ್ತಾಂಶ ಸಂಗ್ರಹಿಸುವ ಕುರಿತು ಈಗಾಗಲೇ ತರಬೇತಿ ಪಡೆದ ತಾಲ್ಲೂಕು ಮಟ್ಟದ ಮಾಸ್ಟರ್ಸ್ ಟ್ರೈನರ್ಸ್‌ಗಳಿಂದ 2025ರ ಮೇ 02ರಂದು ಸಮೀಕ್ಷಾ ಕಾರ್ಯ ಕೈಗೊಳ್ಳುವ ಕುರಿತು ನಿಯೋಜಿಸಲಾದ ಶಿಕ್ಷಣ ಇಲಾಖೆಯ ಗಣತೀದಾರರಿಗೆ ಮತ್ತು ಮೇಲ್ವಿಚಾರಕರುಗಳಿಗೆ ತರಬೇತಿ ನೀಡಲಾಗಿದೆ.

ಸಮೀಕ್ಷೆ ಕುರಿತು ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ವಾಸವಾಗಿರುವ ಎಲ್ಲಾ ಪರಿಶಿಷ್ಟ ಜಾತಿ ಜನಾಂಗದ ಸಮುದಾಯಗಳಿಗೆ ಸ್ಥಳೀಯ ಸಂಸ್ಥೆಗಳ ಮೂಲಕ, ದಿನಪತ್ರಿಕೆ ಹಾಗೂ ಆಕಾಶವಾಣಿ ಪ್ರಸಾರ ಕೇಂದ್ರದ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲಾಗುತ್ತಿದ್ದು, ಎಲ್ಲಾ ಪರಿಶಿಷ್ಟ ಜಾತಿ ಜನಾಂಗದವರ ಮನೆ ಮನೆಗೆ ಸಮೀಕ್ಷಾ ಕಾರ್ಯಕ್ಕೆ ಭೇಟಿ ನೀಡುವ ಗಣತಿದಾರರು ಮನೆಯ ಮುಖ್ಯಸ್ಥರ ಒಪ್ಪಿಗೆ ಪಡೆದು ದತ್ತಾಂಶವನ್ನು ಸಂಗ್ರಹಿಸಲು ನಿರ್ದೇಶಿಸಲಾಗಿದೆ. ಸಮೀಕ್ಷೆ ನಡೆಸುವ ಎಲ್ಲಾ ಗಣತಿದಾರರಿಗೆ ಅಗತ್ಯ ಕಿಟ್‌ಗಳನ್ನು ವಿತರಿಸಲಾಗಿದೆ. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಸೇರಿದಂತೆ ಗಣತಿ ದಾರರು, ಮೇಲ್ವಿಚಾರಕರು, ಸಮಾಜದ ಹಲವು ಮುಖಂಡರು ಇದ್ದರು.

## ಪ್ರಮುಖ ಸುದ್ದಿ

# ಪಾಕ್ ಪ್ರಜೆಗಳನ್ನು ವಾಪಸ್ ಕಳಿಸಿಕೊಡಲು ಮನವಿ

» **ಚಿತ್ರದುರ್ಗ**

ಪಾಕಿಸ್ತಾನದ ಪ್ರಜೆಗಳು ಇನ್ನೂ ಕರ್ನಾಟಕದಲ್ಲಿದ್ದು ಅವರನ್ನು ಪಾಕಿಸ್ತಾನಕ್ಕೆ ಕಳಿಸಿಕೊಡಲು ಕರ್ನಾಟಕ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಭಾರತೀಯ ಜನತಾ ಪಾರ್ಟಿವತಿಯಿಂದ ಮಾನವಿ ಸಲ್ಲಿಸಲಾಯಿತು.

ಏ.24 ರಂದು ಫಹಲ್ಗಾಮ್‌ನಲ್ಲಿ ನಡೆದ ಅತ್ಯಂತ ಪೈಶಾಚಿಕ ಭಯೋತ್ಪಾದಕರ ಕೃತ್ಯದ ಪರಿಣಾಮವಾಗಿ 26 ಜನ ಮುಗ್ಧ ಪ್ರವಾಸಿಗರು ಕೊನೆ ಉಸಿರೆಳೆದಿದ್ದಾರೆ. ಈ ಹಿನ್ನೆಲೆಯಲ್ಲಿದೇಶದಪ್ರಧಾನಮಂತ್ರಿಗಳಾದ ನರೇಂದ್ರ ಮೋದಿಜಿಪಾಕಿಸ್ತಾನದ ಪ್ರೇರಿತ ಉಗ್ರರನ್ನು ಹೆಡೆಮುರಿಕಟ್ಟಲು ಸಾಕಷ್ಟು ಕಠಿಣ ನಿರ್ಣಯಗಳನ್ನು ತೆಗೆದುಕೊಂಡಿರುವುದನ್ನು ನಾವು ಸ್ವಾಗತಿಸಿದ್ದು,ಈ ನಿರ್ಧಾರಗಳಲ್ಲಿ ಒಂದಾದ ಭಾರತ ದೇಶದಲ್ಲಿ ಇರತಕ್ಕಂತ ಪಾಕಿಸ್ತಾನಿ ಪ್ರಜೆಗಳು 48 ಗಂಟೆಗಳೊಳಗೆ ಹಿಂದಿರುಗಲು ಈಗಾಗಲೇ ಸೂಚನೆಯನ್ನು ಕೇಂದ್ರ ಸರ್ಕಾರ ರಾಜ್ಯ ಸರ್ಕಾರಗಳಿಗೆ ನೀಡಿತ್ತು. ಆದರೆ ಕರ್ನಾಟಕ ರಾಜ್ಯ ಸರ್ಕಾರ ಈ ಪ್ರಕ್ರಿಯೆಯನ್ನು ಕಠಿಣವಾಗಿ ತೆಗೆದುಕೊಳ್ಳದೆ ಇನ್ನೂ ಕೂಡ ಪಾಕಿಸ್ತಾನಿ ಪ್ರಜೆಗಳು ನಮ್ಮ ಕರ್ನಾಟಕದಲ್ಲಿ ವಾಸವಿರುವ ಮಾಹಿತಿಗಳು ಲಭ್ಯವಾಗಿವೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಸರ್ಕಾರ ತಕ್ಷಣವೇ ಇಲ್ಲಿ ವಾಸವಾಗಿರುವ ಪಾಕಿಸ್ತಾನಿ ಪ್ರಜೆಗಳನ್ನು ಪಾಕಿಸ್ತಾನಕ್ಕೆ ಹಿಂದಿರುಗಿಸಲು ಸೂಕ್ತ ನಿರ್ದೇಶನವನ್ನು ನೀಡಬೇಕಾಗಿ ರಾಜ್ಯಪಾಲರನ್ನು ಕೇಳಿಕೊಳ್ಳಲಾಗಿದೆಪೆಹಲಗಾವ್ಪ್ರದಲ್ಲಿ ಪ್ರವಾಸಿಗರ ಮೇಲೆ ನಡೆದ ಮಾರಣಾಂತಿಕ ಹಲ್ಲೆ ಮತ್ತು ಹತ್ಯೆಯನ್ನು ಪಾಕಿಸ್ತಾನದ ಪ್ರಾಯೋಜಿತ ಉಗ್ರರ ದಾಳಿಯನ್ನು ನಾವೆಲ್ಲರೂ ಭಾರತೀಯರಾಗಿ ಉಗ್ರವಾಗಿ ಖಂಡಿಸಿದ್ದು,. ಕರ್ನಾಟಕ ರಾಜ್ಯ ಸರ್ಕಾರ ತಕ್ಷಣವೇ ಇಲ್ಲಿ ವಾಸವಾಗಿರುವ ಪಾಕಿಸ್ತಾನಿ ಪ್ರಜೆಗಳನ್ನು ಪಾಕಿಸ್ತಾನಕ್ಕೆ ಹಿಂದಿರುಗಿಸಲು ಒತ್ತಡ ಮತ್ತು ಸೂಕ್ತ ನಿರ್ದೇಶನವನ್ನು ತಾವು ಕರ್ನಾಟಕ ರಾಜ್ಯ ಸರ್ಕಾರಕ್ಕೆ ನೀಡಬೇಕೆಂದು ಮನವಿ ಮಾಡಲಾಯಿತು. ಇದೇ ರೀತಿ ಅಕ್ರಮವಾಗಿ ನೆಲೆಸಿರುವ ಪಾಕಿಸ್ತಾನಿ ಪ್ರಜೆಗಳಿಗೆ ನಮ್ಮ ಜಿಲ್ಲೆಯಲ್ಲಿ ಗುರುತಿಸಿ ಹೊರ ಹಾಕುವ ಬಗ್ಗೆ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿತ್ತುಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಸುರೇಶ್ ಸಿದ್ದಾಪುರ, ರಾಮದಾಸ್, ಬಿಜೆಪಿ ಮುಖಂಡರಾದ ಗುಂಡಾರ್ಪಿ ಸಿದ್ದಾರ್ಥ್, ಜೈಪಾಲಯ್ಯ, ವೆಂಕಟೇಶ್ ಯಾದವ್, ನಾಗರಾಜ್ ಬೇದ್ರೆ, ರಾಮರೆಡ್ಡಿ, ಶೈಲೇಶ್ ಶ್ರೀರಾಮ್ ರೆಡ್ಡಿ ಜಿಂಕಲ್ ಬಸವರಾಜ್ ಯಶವಂತ್ ಕಿರಣ್ ಉಪಸ್ಥಿತರಿದ್ದರು



## ಫಾಸ್ಟ್ ನ್ಯೂಸ್

### ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ: ವಿವಿಧ ಹುದ್ದೆಗಳ ನೇಮಕಾತಿಗೆ ಅರ್ಜಿ

» **ಚಿತ್ರದುರ್ಗ**

ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರಕ್ಕೆ ಗೌರವಧನ ಆಧಾರದ ಮೇಲೆ ವಿವಿಧ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ಮೇ 17 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಸಂದರ್ಶನದ ಮೂಲಕ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. 18–45 ವರ್ಷಗಳ ವಯೋಮಿತಿಯಲ್ಲಿರುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಫಿಸಿಯೋಥೆರಪಿಸ್ಟ್/ಆಕ್ಯುಪೇಷನಲ್ ಥೆರಪಿಸ್ಟ್–1 ಹುದ್ದೆ ಖಾಲಿ ಇದ್ದು, ಡಿಗ್ರಿ ಇನ್ ಪಿಸಿಯೋಥೆರಪಿ/ಆಕ್ಯುಪೇಷನಲ್ ಥೆರಪಿ ವಿದ್ಯಾರ್ಹತೆ ಹೊಂದಿರಬೇಕು. ಮಾಸಿಕ ರೂ.25000/– ನೀಡಲಾಗುವುದು. ಪ್ರಾಥೋಟಿಸ್ಟ್ ಮತ್ತು ಆರ್ಥೋಟಿಸ್ಟ್ (ಪಿ&ಒ)–1 ಹುದ್ದೆ ಖಾಲಿ ಇದ್ದು, ಡಿಪ್ಲೊಮಾ ಇನ್ ಪಿ&ಓ/ಐಟಿಐ (ಫಿಟ್ಟರ್) ವಿದ್ಯಾರ್ಹತೆ ಹೊಂದಿರಬೇಕು. ಮಾಸಿಕ ರೂ.12000/–ವೇತನ ನೀಡಲಾಗುವುದು. ಸ್ಪೀಚ್ ಥೆರಪಿಸ್ಟ್ & ಆಡಿಯಾಲಿಜಿಸ್ಟ್–1 ಹುದ್ದೆ ಖಾಲಿ ಇದ್ದು, ಬಿ.ಎಸ್ಸಿ ಇನ್ ಸ್ಪೀಚ್ ಮತ್ತು ಆಡಿಯಾಲಜಿ ವಿದ್ಯಾರ್ಹತೆ ಹೊಂದಿರಬೇಕು. ಮಾಸಿಕ ರೂ.25000/–ವೇತನ ನೀಡಲಾಗುವುದು. ಮೊಬಿಲಿಟಿ ಇನ್‌ಸ್ಟ್ರಕ್ಟರ್–1 ಹುದ್ದೆ ಖಾಲಿ ಇದ್ದು, ಸರ್ಟಿಫಿಕೇಟ್ ಕೋರ್ಸ್ ಇನ್ ಓರಿಯಂಟೇಷನ್ & ಮೊಬಿಲಿಟಿ (ಓ&ಎಂ) ವಿದ್ಯಾರ್ಹತೆ ಹೊಂದಿರಬೇಕು. ಮಾಸಿಕ ರೂ.8000/–ವೇತನ ನೀಡಲಾಗುವುದು. ಇಯರ್ ಮೋಲ್ಡ್ ಟೆಕ್ನಿಷಿಯನ್–1 ಹುದ್ದೆ ಖಾಲಿ ಇದ್ದು, ಸರ್ಟಿಫಿಕೇಟ್ ಇನ್ ಇಯರ್ ಮೋಲ್ಡ್ ಟೆಕ್ನಾಲಜಿ ವಿದ್ಯಾರ್ಹತೆ ಹೊಂದಿರಬೇಕು. ಮಾಸಿಕ ರೂ.8000/–ವೇತನ ನೀಡಲಾಗುವುದು. ಹುದ್ದೆ ಮತ್ತು ವಿದ್ಯಾರ್ಹತೆಗನುಗುಣವಾಗಿ ಸ್ವ–ವಿವರದೊಂದಿಗೆ ಅರ್ಜಿಯನ್ನು ಸಿದ್ದಪಡಿಸಿ, ಮೊಬೈಲ್ ಸಂಖ್ಯೆ ನಮೂದಿಸಿ, ಅಗತ್ಯ ದಾಖಲೆಗಳೊಂದಿಗೆ ಕಾರ್ಯದರ್ಶಿಗಳು, ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ , ಲೋಕಾಯುಕ್ತ ಕಚೇರಿ ಆವರಣ ಬಿ.ಡಿ.ರಸ್ತೆ ಚಿತ್ರದುರ್ಗ–577501, ದೂರವಾಣಿ ಸಂಖ್ಯೆ 08194–220085, ಮೊಬೈಲ್ 9448038400 ಹೆಸರಿನಲ್ಲಿ ಅರ್ಜಿಗಳನ್ನು ಸಲ್ಲಿಸಬೇಕು. ಹೆಚ್ಚಿನ ವಿವರಗಳಿಗೆ ಕಚೇರಿಯಿಂದ ಮಾಹಿತಿ ಪಡೆಯಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ತಿಳಿಸಿದ್ದಾರೆ.

### ಬೆಂಬಲ ಬೆಲೆಯಲ್ಲಿ ಭತ್ತ ಖರೀದಿ, ನೋಂದಣಿ ಅವಧಿ 31ರವರೆಗೆ ವಿಸ್ತರಣೆ

» **ದಾವಣಗೆರೆ**



ಪ್ರಸಕ್ತ ಸಾಲಿನ ಹಿಂಗಾರು ಹಂಗಾಮಿನಲ್ಲಿ ರೈತರಿಂದ ಬೆಂಬಲ ಬೆಲೆಯಲ್ಲಿ ಭತ್ತ ಖರೀದಿಗೆ ನೊಂದಣಿ ಅವಧಿಯನ್ನು ಮೇ 31 ರ ವರೆಗೆ ವಿಸ್ತರಿಸಿ ಸರ್ಕಾರ ಆದೇಶಿಸಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಟಾಸ್ಕ್ ಪೋರ್ಸ್ ಸಮಿತಿ ಅಧ್ಯಕ್ಷರಾದ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ. ಕ್ವಿಂಟಾಲ್ ಭತ್ತಕ್ಕೆ ಎ.ಗ್ರೇಡ್ ರೂ.2320, ಸಾಮಾನ್ಯ ಭತ್ತ ರೂ. 2300 ಗಳ ಬೆಂಬಲ ಬೆಲೆಯಲ್ಲಿ ಖರೀದಿ ಮಾಡಲು ಜಗಳೂರು ಹೊರತುಪಡಿಸಿ ಎಲ್ಲಾ ಎಪಿಎಂಸಿಗಳಲ್ಲಿ ಖರೀದಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಪ್ರತಿ ರೈತರಿಂದ 25 ಕ್ವಿಂಟಾಲ್‌ನಿಂದ ಗರಿಷ್ಠ 50 ಕ್ವಿಂಟಾಲ್‌ವರೆಗೆ ಖರೀದಿ ಮಾಡಲಾಗುತ್ತದೆ. ಭತ್ತ ಕಟಾವು ನಡೆಯುತ್ತಿರುವುದರಿಂದ ಬೆಂಬಲ ಬೆಲೆಯಲ್ಲಿ ಭತ್ತ ಖರೀದಿ ನೊಂದಣಿ ದಿನಾಂಕವನ್ನು ವಿಸ್ತರಣೆ ಮಾಡಲು ಜಿಲ್ಲಾಧಿಕಾರಿಯವರು ಪತ್ರ ಬರೆದ ಮೇರೆಗೆ ಅವಧಿ ವಿಸ್ತರಣೆ ಮಾಡಲಾಗಿದ್ದು ಮತ್ತೆ ನೊಂದಣಿ ಹಾಗೂ ಖರೀದಿ ಅವಧಿ ವಿಸ್ತರಣೆ ಮಾಡಲಾಗುವುದಿಲ್ಲ. ರೈತರು ತಾವು ಬೆಳೆದ ಭತ್ತವನ್ನು ಖರೀದಿ ಕೇಂದ್ರಗಳಲ್ಲಿ ಮಾರಾಟ ಮಾಡಲು ನೊಂದಾಯಿಸಲು ಅವರು ತಿಳಿಸಿದ್ದಾರೆ.

### ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

» **ದಾವಣಗೆರೆ**

ಮೀನುಗಾರಿಕೆ ಇಲಾಖೆವತಿಯಿಂದ ಪ್ರಸಕ್ತ ಸಾಲಿನ ವಸತಿ ರಹಿತ ಮೀನುಗಾರರಿಗೆ ಸರ್ಕಾರದ ಮತ್ಸ್ಯಾಶ್ರಯ ಯೋಜನೆಯಡಿ ಮನೆಗಳನ್ನು ನಿರ್ಮಿಸಲು ಸಹಾಯಧನ ನೀಡುವ ಯೋಜನೆಯ ಸೌಲಭ್ಯಗಳನ್ನು ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲೆಯ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 25 ರಂತೆ ಒಟ್ಟು 175 ಮನೆಗಳನ್ನು ಹಂಚಿಕೆ ಮಾಡಲಾಗಿದೆ. ಅರ್ಜಿಯನ್ನು ಕಚೇರಿಯ ವೇಳೆಯಲ್ಲಿ ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿ ದಾವಣಗೆರೆ, ಹರಿಹರ, ಹೊನ್ನಾಳಿ, ಚನ್ನಗಿರಿ, ಜಗಳೂರು ಕಚೇರಿಗಳಿಗೆ ಭೇಟಿ ನೀಡಿ ಪಡೆದುಕೊಳ್ಳಬಹುದು. ಅರ್ಜಿ ಸಲ್ಲಿಸಲು ಜೂನ್ 30 ಕೊನೆಯ ದಿನವಾಗಿರುತ್ತದೆ ಎಂದು ಮೀನುಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

# ಪಾಕ್ ಪ್ರಜೆಗಳನ್ನು ಹುಡುಕಿ ಹೊರ ಹಾಕಿ

» **ಚಿತ್ರದುರ್ಗ**

ನಮ್ಮ ಜಿಲ್ಲೆಯಲ್ಲಿ ಯಾರೇ ಪಾಕಿಸ್ತಾನದ ಪ್ರಜೆಗಳು ಇದ್ದರು ಅವರನ್ನ ಹೊರ ಹಾಕುವ ಕೆಲಸ ಜಿಲ್ಲಾಡಳಿತ ಮಾಡಬೇಕು ಈ ಕುರಿತು ಕೇಂದ್ರ ಸರ್ಕಾರ ಸಹ ಸೂಚನೆ ಕೊಟ್ಟಿದ್ದು ರಾಜ್ಯ ಸರ್ಕಾರ ದಿಟ್ಟ ನಿರ್ಧಾರ ತೆಗೆದುಕೊಂಡು ಅವರನ್ನ ಹೊರ ಹಾಕಬೇಕು ಎಂದು ಗೋವಿಂದ ಕಾರಜೋಳ ತಿಳಿಸಿದ್ದಾರೆ.

ಇಂದು ಚಿತ್ರದುರ್ಗದ ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪೆಹಲ್ಗಾಮ್‌ನ ಉಗ್ರರ ದಾಳಿ ಖಂಡಿಸಿ ತಕ್ಕ ಉತ್ತರಕ್ಕೆ ಪ್ರಧಾನಿಗಳು ಐದು ಪ್ರಮುಖ ನಿರ್ಣಯಗಳನ್ನು ಕೈಗೊಂಡಿದ್ದಾರೆ. ಈ ಹಿನ್ನೆಲೆ ನಾವೆಲ್ಲ ಸರ್ಕಾರದ ಜೊತೆ ಇದ್ದು ಭಯೋತ್ಪಾದನಾ ಚಟುವಟಿಕೆ ತಡೆಗೆ ಬಹುತೇಕ ದೇಶಗಳು ನಮ್ಮ ದೇಶದ ಜೊತೆ ಇದ್ದಾವೆ. ಈ ಸಂದರ್ಭದಲ್ಲಿ ಪಾಕಿಸ್ತಾನಕ್ಕೆ ತಕ್ಕ ಉತ್ತರ ಕೊಡುವ ನಿಟ್ಟಿನಲ್ಲಿ ಪಾಕಿಸ್ತಾನದ ಜೊತೆ ನಮ್ಮ ಸಂಬಂದವನ್ನ ಕಡಿದು ಹಾಕಿದ್ದೇವೆ ಎಂದರು.

ನಮ್ಮ ಜಿಲ್ಲೆಯಲ್ಲಿ ಯಾರೇ ಪಾಕಿಸ್ತಾನದ ಪ್ರಜೆಗಳು ಇದ್ದರು ಅವರನ್ನ ಹೊರ ಹಾಕುವ ಕೆಲಸ ಜಿಲ್ಲಾಡಳಿತ ಮಾಡಬೇಕು ಈ ಕುರಿತು ಕೇಂದ್ರ ಸರ್ಕಾರ ಸಹ ಸೂಚನೆ ಕೊಟ್ಟಿದ್ದು ರಾಜ್ಯ ಸರ್ಕಾರ ದಿಟ್ಟ ನಿರ್ಧಾರ ತೆಗೆದುಕೊಂಡು ಅವರನ್ನ ಹೊರ ಹಾಕಬೇಕು ಎಂದು ಗೋವಿಂದ ಕಾರಜೋಳ ತಿಳಿಸಿದ್ದು ಇನ್ನೂ ಕಾಂಗ್ರೆಸ್ ಸರ್ಕಾರ ಬಂದು ಎರಡು ವರ್ಷ ಆದರೂ ಕೂಡ ಅಭಿವೃದ್ಧಿ ಕೆಲಸ ಆಗುತ್ತಿಲ್ಲ, ಕೇವಲ ಭಾವನಾತ್ಮಕ ಸಮಸ್ಯೆಗಳ ಮೂಲಕ ಓಟ್ ಬ್ಯಾಂಕ್‌ಗೋಸ್ಕರ ಆಲೋಚನೆಯಲ್ಲಿ ಇದ್ದಾರೆ. ಮೂರುವರೆ ಸಾವಿರ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದ ಸಿದ್ದರಾಮಯ್ಯ ಅವರು ಭಂಡತನದಿಂದ ಇದ್ದು ನುಡಿದಂತೆ ನಡೆದಿಲ್ಲ ಎಂದು ದೂರಿದರು.

ಭಯೋತ್ಪಾದಕರಮಟ್ಟಹಾಕಲಿಕ್ಕೆದೇಶದ 140 ಕೋಟಿ ಜನ ಕೇಂದ್ರ ಸರ್ಕಾರದ ಜೊತೆಯಲ್ಲಿ ಇದ್ದಾರೆ.ಭಯೋತ್ಪಾದನಾ ಚಟುವಟಿಕೆಯನ್ನು ತಡೆಗಟ್ಟಲಿಕ್ಕೆ ಪ್ರಮುಖ ದೊಡ್ಡ ದೊಡ್ಡ ರಾಷ್ಟ್ರಗಳು ಭಾರತದ ಜೊತೆ ನಿಲ್ಲುವ ಭರವಸೆಯನ್ನು ನೀಡಿವೆ.ಪಾಕಿಸ್ತಾನಿಗಳು ನಮ್ಮ ದೇಶದಲ್ಲಿ ಇನ್ನೂ ಉಳಿದಿದ್ದಾರೆ ಅವರನ್ನು ಹೊರ ಹಾಕಲಿಕ್ಕೆ ಕಠಿಣ ಕ್ರಮ ಕೈಗೊಳ್ಳಬೇಕು ಬೆಂಗಳೂರು, ಗುಲ್ಬರ್ಗದಂತಹ ದೊಡ್ಡ




ದೊಡ್ಡ ನಗರಗಳಲ್ಲಿ ಇನ್ನೂ ಇದ್ದಾರೆ ಎಂಬ ಮಾಹಿತಿಯಿದೆ.. ಅವರನ್ನು ಹೊರ ಹಾಕಬೇಕು ಹೊರ ಹಾಕಲಿಕ್ಕೆ ರಾಜ್ಯ ಸರ್ಕಾರ ಯಾವುದೇ ಹಿಂದೇಟು ಹಾಕಬಾರದು.ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಎರಡು ವರ್ಷ ಆಗುತ್ತಾ ಬಂದಿದೆ ಯಾವುದೇ ಜಿಲ್ಲೆಯಲ್ಲಿ ಒಂದೇ ಒಂದು ಪೈಸೆ ಅಭಿವೃದ್ಧಿ ಕೆಲಸ ಆಗಿಲ್ಲ.ಮುಖ್ಯಮಂತ್ರಿ ಸಿದ್ದರಾಮಯ್ಯರವರು ಭಾವನಾತ್ಮಕ ಸಂಕಷ್ಟಗಳನ್ನು ಸೃಷ್ಟಿ ಮಾಡಿ ಓಟ್ ಬ್ಯಾಂಕ್ ಮಾಡಿಕೊಳ್ಳುವ ಆಲೋಚನೆಯಲ್ಲಿದ್ದಾರೆ. ರಾಜ್ಯದಲ್ಲಿ ಸಿದ್ದರಾಮಯ್ಯ ಸರ್ಕಾರ ಬಂದ ಮೇಲೆ ಕಾನೂನು ಸುವ್ಯಸ್ಥೆ ಹದಗೆಟ್ಟಿದೆ ಅಧಿಕಾರಿಗಳು, ಗುತ್ತಿಗೆದಾರರು ಆತ್ಮಹತ್ಯೆ ಮಾಡಿ ಕೊಳ್ಳುತ್ತಿದ್ದಾರೆ.ಕಳೆದ ಎರಡು ವರ್ಷದಿಂದ ರಾಜ್ಯದಲ್ಲಿ 3100 ಜನ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.. ಮೈಕ್ರೋ ಫೈನಾನ್ಸ್‌ನವರ ಸಾಲ ವಸೂಲಾತಿಗೆ ಹೆದರಿ ಜನರ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ.. ಆದರೂ ಭಂಡತನದ ಮುಖ್ಯಮಂತ್ರಿಗಳು ನುಡಿದಂತೆ ನಡೆದಿದ್ದೇವೆ ಅಂತ ಹೇಳುತ್ತಿದ್ದಾರೆ ಎಂದು ಟೀಕಿಸಿದರು.

ನಿಮ್ಮಗ್ಯಾರೆಂಟಿಯೋಜನೆಗಳಬಗ್ಗೆನೀವೇ ಅವಲೋಕನ ಮಾಡಿಕೊಳ್ಳಿ ಯುವನಿಧಿ ಯೋಜನೆಯ ಫಲಾನುಭವಿಗಳಿಗೆ ಹಣ ಏಕೆ ನೀಡಿಲ್ಲ...?ಒಳ ಮೀಸಲಾತಿ ಜಾರಿ ವಿಚಾರವಾಗಿ 01.08.2024 ರಂದು ಸುಪ್ರೀಂ ಕೋರ್ಟ್ ಮಹತ್ವದ ಆದೇಶ ನೀಡಿದೆ... ಆದರೆ ಮುಖ್ಯಮಂತ್ರಿಗಳು ಜಾರಿ ಮಾಡದೇ ಆಯೋಗ ರಚನೆ ಅಂತ ಹೇಳುತ್ತಿದ್ದಾರೆ.ಕೇಂದ್ರ ಸರ್ಕಾರ ಜನಗಣತಿ ಜೊತೆಜಾತಿಗಣತಿ ಮಾಡಲುನಿರ್ಧರಿಸಿದೆ.. ಆದರೆ ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆಯವರು ನಮ್ಮ ಒತ್ತಡಕ್ಕೆ ಮಣಿದು ಜಾತಿಗಣತಿ ಮಾಡುತ್ತಿದ್ದಾರೆ ಎಂದು ಹೇಳುತ್ತಿದ್ದಾರೆ ಇದು ಸತ್ಯಕ್ಕೆ ದೂರವಾದ ಮಾತು.ಜಾತಿ ಗಣತಿ ಮಾಡುವ ಉದ್ದೇಶ ಈಗಾಗಲೇ ಲೋಕಸಭೆಯಲ್ಲಿ ಮಹಿಳಾ ಮೀಸಲಾತಿ ಬಿಲ್ ಪಾಸಾಗಿರುವುದರಿಂದ ಮಹಿಳೆಯರಿಗೂ ಸಹ ಮೀಸಲಾತಿ ಮತ್ತು ಒಳ ಮೀಸಲಾತಿ ಕೊಡಬೇಕಾಗಿರುವುದರಿಂದ ಜಾತಿ ಗಣತಿ ಅವಶ್ಯಕತೆಯಿದೆ.ನರೇಂದ್ರ ಮೋದಿಯವರು ಕಳೆದ 25 ವರ್ಷದಿಂದ ಕಳಂಕರಹಿತ ಆಡಳಿತ ನಡೆಸಿದ ಕೆಳ ಸಮುದಾಯದ ನಾಯಕ.. ಇವರಿಂದ ಕೆಳ ಸಮುದಾಯಕ್ಕೆ ಹಾಗೂ ಹಿಂದುಳಿದ ಸಮುದಾಯಕ್ಕೆ ಯಾವುದೇ ಅನ್ಯಾಯವಾಗುವುದಿಲ್ಲ ಎಂದರು.

ಕಾಂತರಾಜ್ ವರದಿಗೆ ಕಾಂತರಾಜ್ ಹಾಗೂ ಕಮಿಟಿ ಸದಸ್ಯರೇ ಸಹಿ ಮಾಡಿಲ್ಲ.2023ರವಿಧಾನಸಭಾಚುನಾವಣೆ ಸಂದರ್ಭದಲ್ಲಿ ಇದೇ ಚಿತ್ರದುರ್ಗ ನಗರದಲ್ಲಿ ನಾವು ಅಧಿಕಾರಕ್ಕೆ ಬಂದರೆ ಒಳ ಮೀಸಲಾತಿ ಜಾರಿ ಮಾಡುತ್ತೇವೆ ಎಂದು ಹೇಳಿದ್ದ ಸಿದ್ದರಾಮಯ್ಯರವರು ಈಗ ವರದಿಯನ್ನು ಕೆಳಗೆ ಹಾಕಿಕೊಂಡು ಕುಳಿತಿದ್ದಾರೆ.. ಕಾಂಗ್ರೆಸ್ ನವರು ಎರಡು ನಾಲಿಗೆ ನಾಯಕರು ಅಂಬೇಡ್ಕರ್ ರವರನ್ನು ಸೋಲಿಸಿದ್ದು ಕಾಂಗ್ರೆಸ್ ನವರು.. ಕಾಂಗ್ರೆಸ್ ನವರಿಗೆ ಅಸ್ಪೃಶ್ಯರ ಬಗ್ಗೆ, ಹಿಂದುಳಿದವರ ಬಗ್ಗೆ ಕಳಕಳಿ ಇಲ್ಲ... ಕಾಂಗ್ರೆಸ್ ಪಕ್ಷಕ್ಕೆ ದಲಿತರನ್ನು ಉದ್ಧಾರ ಮಾಡಲಿಕ್ಕೆ ಆಗಲ್ಲ ಎಂದು ಸಂಸದರು ದೂರಿದರು.

ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್ ನವೀನ್ ಮಾತನಾಡಿ ಮೇ.8ರಂದು ನಡೆಯುವ ಜನಾಕೋಶ ಯಾತ್ರೆಯ ಸಂದರ್ಭದಲ್ಲಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ರವರ ವಿಚಾರಧಾರೆಗಳನ್ನು ಮಂಡನೆ ಮಾಡಲಿದ್ದೇವೆ... ಅಂಬೇಡ್ಕರ್ ರವರ ಭಾವಚಿತ್ರ ಮೆರವಣಿಗೆಯನ್ನು ಸಹ ಮಾಡಲಿದ್ದೇವೆ.ಅಂಬೇಡ್ಕರ್ ರವರು ಲಕ್ನೋದಲ್ಲಿ ಕಾಂಗ್ರೆಸ್ ಒಂದು ಸುಡುವ ಮನೆ ಅದರಿಂದ ಹೊರಬನ್ನಿ ಎಂದು ದಲಿತರಿಗೆ ಕರೆ ಕೊಟ್ಟಿದ್ದರು.ಸಿದ್ದರಾಮಯ್ಯರವರು ನಡೆಸಿದ ಜಾತಿ ಗಣತಿ ಬೋಗಸ್ ಜಾತಿ ಗಣತಿ.. ಅದರ ಮೂಲ ವರದಿ ಕಳೆದು ಹೋಗಿದೆ ಅಂತ ಹೇಳುತ್ತಾರೆ. ಕೇಂದ್ರ ಸರ್ಕಾರದ ನೈಜ ಜಾತಿಗಣತಿ ಹೊರಗೆ ಬಂದರೆ ಸಿದ್ದರಾಮಯ್ಯರವರ ಬಣ್ಣ ಯಾವಾಗ ಬಯಲಾಗುತ್ತೋ ಅನ್ನುವ ಕಾರಣದಿಂದ ನಮ್ಮ ಒತ್ತಡದಿಂದ ಕೇಂದ್ರ ಸರ್ಕಾರ ಜಾತಿಗಣತಿ ಮಾಡಲು ಹೊರಟಿದೆ ಅಂತ ಹೇಳುತ್ತಿದ್ದಾರೆ..ಬಿಜೆಪಿ ಪಕ್ಷವು ಜಾತಿ ಗಣತಿ ಮಾಡುವಂತೆ ಹೋರಾಟ ಮಾಡುತ್ತಾ ಬಂದಿದೆ.. ಆದರೆ ಸಿದ್ದರಾಮಯ್ಯನವರ ವರದಿಯ ಬಗ್ಗೆ ವಿರೋಧವಿದೆ.ರಾಜ್ಯದಲ್ಲಿ ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿಯವರ ಕೊಲೆಯಾಗಿದೆ... ಮತ್ತೆ ಇಬ್ಬರಿಗೆ ಕೊಲೆಯ ಬೆದರಿಕೆ ಬಂದಿದೆ. ಮುಖ್ಯಮಂತ್ರಿಗಳಿಗೆ ಕೊಲೆ ಆದವರ ಬಗ್ಗೆ ಇರಬೇಕಾದ ಅನುಕಂಪಕ್ಕಿಂತ ಕೊಲೆ ಮಾಡಿದವರ ಬಗ್ಗೆ ಅನುಕಂಪ ಜಾಸ್ತಿಯಿದೆ ಎಂದು ಟೀಕಿಸಿದರು.

ಈ ಸರ್ಕಾರ ಬಂದಾಗಿನಿಂದ ನಿರಂತರವಾಗಿ ಹಿಂದೂ ಕಾರ್ಯಕರ್ತರ ಕೊಲೆ ನಡೆಯುತ್ತಿದೆ.ರಾಜ್ಯದ ಪೊಲೀಸರಿಗೆ ಸ್ವತಂತ್ರವಾಗಿ ಕೆಲಸ ಮಾಡಲು ಬಿಡಿ.ಈ ಸರ್ಕಾರ ಬಂದಾಗಿನಿಂದ 16 ಸಾವಿರ ರೌಡಿ ಶೀಟರ್ ಗಳ ರೌಡಿ ಶೀಟ್ ಗಳನ್ನು ವಾಪಾಸ್ ಪಡೆದಿದ್ದಾರೆ..ನಾನು ರಾಜ್ಯದ ಜಿಲ್ಲಾವಾರು ರೌಡಿಶೀಟರ್ ಗಳ ಮಾಹಿತಿಯನ್ನು ಕೊಡಿ ಎಂದು ಈಗಾಗಲೇ ಸಭಾಧ್ಯಕ್ಷರ ಮೂಲಕ ಮನವಿ ಮಾಡಿದ್ದೇನೆ.

ಇದೇ ತಿಂಗಳು 8 ನೇ ತಾರೀಕು ಭ್ರಷ್ಟ ಕಾಂಗ್ರೆಸ್ ಸರ್ಕಾರದ ವಿರುದ್ಧ ಚಿತ್ರದುರ್ಗಕ್ಕೆ ಜನಾಕ್ರೋಶ ಯಾತ್ರೆ ಆಗಮಿಸಲಿದೆ. ರಾಜ್ಯ ಸರ್ಕಾರದ ವಿರುದ್ಧ ಜನಾಕ್ರೋಶ ಯಾತ್ರೆಯನ್ನು ಕೈಗೊಂಡಿದ್ದೆವು.. ಪಹಲ್ಗಾಮ್ ನಲ್ಲಿ ನಡೆದ ಭಯೋತ್ಪಾದನಾ ದಾಳಿಯಿಂದ ಯಾತ್ರೆಯನ್ನು ಮುಂದೂಡಿದ್ದೆವು.ದಿನಾಂಕ:08.05.2025 ರಂದು ಜನಾಕ್ರೋಶ ಯಾತ್ರೆಯನ್ನು ಪ್ರಾರಂಭ ಮಾಡಲಿದ್ದೇವೆ.. ಯಾತ್ರೆಯು ತುಮಕೂರಿನಿಂದ ಪ್ರಾರಂಭವಾಗಲಿದ್ದು ದಿನಾಂಕ:08.05.2025 ರಂದು ಮಧ್ಯಾಹ್ನ 3–00 ಗಂಟೆಗೆ ಚಿತ್ರದುರ್ಗ ನಗರಕ್ಕೆ ಆಗಮಿಸಲಿದೆ.ಯಾತ್ರೆಯು ನಗರದ ಶ್ರೀ ನೀಲಕಂಠೇಶ್ವರ ದೇವಸ್ಥಾನದಿಂದ ಪ್ರಾರಂಭವಾಗಿ ಎಂ.ಜಿ ಸರ್ಕಲ್, ಎಸ್.ಬಿ.ಐ ಸರ್ಕಲ್, ಪ್ರವಾಸಿ ಮಂದಿರದ ಮುಖಾಂತರ ಒಬವ್ವ ಸರ್ಕಲ್ ಗೆ ಬಂದು ವೇದಿಕೆ ಕಾರ್ಯಕ್ರಮ ಮಾಡಲಿದ್ದೇವೆ.ಸದರಿ ಯಾತ್ರೆಯಲ್ಲಿ ಬಿಜೆಪಿ ಪಕ್ಷದ ರಾಜ್ಯಾಧ್ಯಕ್ಷರಾದ ಬಿ. ವೈ ವಿಜಯೇಂದ್ರ, ವಿಧಾನ ಸಭೆಯ ವಿರೋಧ ಪಕ್ಷ ನಾಯಕರಾದ ಆರ್. ಅಶೋಕ, ಮಾಜಿ ಸಚಿವರಾದ ಶ್ರೀರಾಮುಲು, ವಿಧಾನ ಪರಿಷತ್ತಿನ ವಿರೋಧಪಕ್ಷ ನಾಯಕರಾದ ಛಲವಾದಿ ನಾರಾಯಣಸ್ವಾಮಿ ರವರುಗಳು ಭಾಗವಹಿಸಲಿದ್ದಾರೆ.

ಗೋಷ್ಠಿಯಲ್ಲಿ ಮಾಜಿ ಶಾಸಕರಾದ ಜಿಎಚ್.ತಿಪ್ಪಾರೆಡ್ಡಿ, ಮಧುಗಿರಿ ಬಿಜೆಪಿ ಜಿಲ್ಲಾಧ್ಯಕ್ಷ ಹನುಮಂತೇಗೌಡ, ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್, ಸುರೇಶ್ ಸಿದ್ದಾಪುರ, ರಾಮದಾಸ್, ಬಿಜೆಪಿ ಮುಖಂಡರಾದ ಗುಂಡಾರ್ಪಿ ಸಿದ್ದಾರ್ಥ್, ಜೈಪಾಲಯ್ಯ, ವೆಂಕಟೇಶ್ ಯಾದವ್, ನಾಗರಾಜ್ ಬೇದ್ರೆ, ರಾಮರೆಡ್ಡಿ, ಶೈಲೇಶ್ ಶ್ರೀರಾಮ್ ರೆಡ್ಡಿ ಜಿಂಕಲ್ ಬಸವರಾಜ್ ಯಶವಂತ್ ಕಿರಣ್ ಉಪಸ್ಥಿತರಿದ್ದರು

# ಕೆ.ಪಿ.ಎಸ್ಸಿ. ಮರು ಪರೀಕ್ಷೆ ನಡೆಸುವಂತೆ ಕರುನಾಡ ವಿಜಯಸೇನೆಯಿಂದ ಮನವಿ

» **ಚಿತ್ರದುರ್ಗ**

ಕೆ.ಇ.ಎಸ್ಸಿ. ಮರು ಪರೀಕ್ಷೆ ನಡೆಸುವಂತೆ ಕರುನಾಡ ವಿಜಯಸೇನೆ ವತಿಯಿಂದ ಅಪರ ಜಿಲ್ಲಾಧಿಕಾರಿ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಸೋಮವಾರ ಮನವಿ ಸಲ್ಲಿಸಲಾಯಿತು.

ಕಳೆದ ವಾರ ನಡೆದ ಕೆ.ಪಿ.ಎಸ್ಸಿ. ಪರೀಕ್ಷೆಯಲ್ಲಿ ಸುಮಾರು 30 ರಿಂದ 40 ಪರೀಕ್ಷಾರ್ಥಿಗಳಿಗೆ ಪ್ರವೇಶ ಪತ್ರ ಸಿಗದೆ ಪರೀಕ್ಷೆಯಿಂದ ವಂಚಿತರಾಗಿದ್ದಾರೆ. ಸರ್ಕಾರ ರಾತ್ರೋ ರಾತ್ರಿ ಪರೀಕ್ಷೆಗೆ ಪ್ರವೇಶ ಪತ್ರಗಳನ್ನು ನೀಡಿದ್ದರಿಂದ 400–500 ಕಿ.ಮೀ. ಗಡಿ ಭಾಗಗಳಿಂದ ಪರೀಕ್ಷಾ ಕೇಂದ್ರಗಳಿಗೆ ಬರಲು ಹೇಗೆ ಸಾಧ್ಯ? ಸರ್ಕಾರವೆ ಇಂತಹ ಲೋಪಗಳನ್ನು ಎಸಗಿದರೆ ಪರೀಕ್ಷಾರ್ಥಿಗಳ ಪಾಡೇನು.

ಇಂತಹ ತಪ್ಪುಗಳನ್ನು ಪ್ರಶ್ನಿಸಿದರೆ ಪೊಲೀಸರ ಮುಖಾಂತರ ಕೇಸು ದಾಖಲಿಸುವ ಕೆಲಸ ಮಾಡುತ್ತಿರುವುದು ಯಾವ ನ್ಯಾಯ? 2023–24 ನೇ ಸಾಲಿಗೆ ಗೆಜೆಟೆಡ್ ಪ್ರೊಬೇಷನರಿ ಗ್ರೂಪ್–ಎ ಮತ್ತು ಬಿ. ವೃಂದದ 384 ಹುದ್ದೆಗಳ ನೇಮಕಾತಿಗೆ ಶನಿವಾರ ಆರಂಭವಾದ ಮುಖ್ಯ




ಪರೀಕ್ಷೆಯಲ್ಲಿಯೂ ಎಡವಟ್ಟುಗಳು ಮರುಕಳಿಸಿವೆ. ಕನ್ನಡ ವ್ಯಾಕರಣ ರಚನೆ ತಪ್ಪು ತಪ್ಪಾಗಿ ಬಳಸಲಾಗಿದೆ. ಕನ್ನಡ ಅರ್ಹತಾ ಪರೀಕ್ಷೆಯಲ್ಲಿ ಹತ್ತಾರು ಇಂಗ್ಲೀಷ್ ಪದಗಳಿವೆ. ಪೂರ್ವಭಾವಿ ಪರೀಕ್ಷೆಗೆ ಹೈಕೋರ್ಟ್ ಅನುಮತಿ ಕೊಟ್ಟ ಕಾರಣ ಶುಕ್ರವಾರ ಮಧ್ಯರಾತ್ರಿ ಪ್ರವೇಶ ಪತ್ರ ವಿತರಿಸಿದ್ದು, ಗಡಿ ಭಾಗದ ಅಭ್ಯರ್ಥಿಗಳು ಪರೀಕ್ಷೆ ಬರೆಯಲು ಅವಕಾಶ ಸಿಗದಿದ್ದರಿಂದ ಮರು ಪರೀಕ್ಷೆ ನಡೆಸುವಂತೆ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಒತ್ತಾಯಿಸಿದರು.

ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ, ಪ್ರಧಾನ ಕಾರ್ಯದರ್ಶಿ ಗೋಪಿನಾಥ್, ನಗರಾಧ್ಯಕ್ಷ ಅವಿನಾಶ್, ವಿಜಯಬಾಬು, ಹರೀಶ್‌ಕುಮಾರ್ ಈ ಸಂದರ್ಭದಲ್ಲಿದ್ದರು.

## ಕಮ್ಯುನಿಸ್ಟ್ ಪಕ್ಷದ ವತಿಯಿಂದ ಸೂರಿಗಾಗಿ ಸಮರ: ಪ್ರತಿಭಟನೆ




» **ಚಿತ್ರದುರ್ಗ**

ಭಾರತ ಕಮ್ಯುನಿಸ್ಟ್ ಪಕ್ಷ ಜಿಲ್ಲಾ ಘಟಕದಿಂದ ಸೂರಿಗಾಗಿ ಸಮರ ನಗರಸಭೆ ಎದುರು ಸೋಮವಾರ ಪ್ರತಿಭಟನೆ ನಡೆಸಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗೆ ಮನವಿ ಸಲ್ಲಿಸಲಾಯಿತು. ನಗರದ ದಾವಣಗೆರೆ ರಸ್ತೆಯಲ್ಲಿರುವ ಕಮ್ಯುನಿಸ್ಟ್ ಕಾರ್ಯಾಲಯದಿಂದ ಮೆರವಣಿಗೆ ಮೂಲಕ ನಗರಸಭೆಗೆ ಆಗಮಿಸಿದ ಪ್ರತಿಭಟನಾಕಾರರು ಬಡವರಿಗೆ ವಸತಿ ಸೌಲಭ್ಯಗಳನ್ನು ಕಲ್ಪಿಸದ ರಾಜ್ಯ ಸರ್ಕಾರದ ವಿರುದ್ಧ ಧಿಕ್ಕಾರಗಳನ್ನು ಕೂಗಿದರು. ಕಮ್ಯುನಿಸ್ಟ್ ಪಕ್ಷ ಜಿಲ್ಲಾ ಕಾರ್ಯದರ್ಶಿ ಕಾಂ.ಜಿ.ಸಿ.ಸುರೇಶ್‌ಬಾಬು ಮಾತನಾಡಿ ನಗರದಲ್ಲಿ ನಿವೇಶನ, ಮನೆಗಳಿಲ್ಲದೆ ಬಾಡಿಗೆ ಮನೆಗಳಲ್ಲಿ ವಾಸಿಸುತ್ತಿರುವ ಬಡವರು ಜೀವಿಸುವುದು ಕಷ್ಟವಾಗಿದೆ. ದಿನನಿತ್ಯದ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ತತ್ತರಿಸಿ ಹೋಗಿದ್ದಾರೆ. ವಸತಿಗಾಗಿ ಹೋರಾಟ ನಡೆಸಿದ ಪ್ರತಿಫಲವಾಗಿ ರಾಜ್ಯದ ಪ್ರತಿ ಹಳ್ಳಿ ಹಳ್ಳಿಗಳಲ್ಲಿಯೂ ಸರ್ವೆ ನಡೆಸಿ ನಿವೇಶನ ಮನೆ ಇಲ್ಲದವರನ್ನು ಗುರುತಿಸುವಂತೆ ರಾಜ್ಯದ ಮುಖ್ಯಮಂತ್ರಿ ಆದೇಶಿಸಿದ್ದಾರೆ.

**ಪ್ರಮುಖ ಸುದ್ದಿ**

# ಕಠಿಣ ಪರಿಶ್ರಮದಿಂದ ಮಾತ್ರ ವಕೀಲ ವೃತ್ತಿಯಲ್ಲಿ ಯಶಸ್ಸು

» **ಚಿತ್ರದುರ್ಗ**

ಬದ್ಧತೆ, ಕಠಿಣ ಪರಿಶ್ರಮ, ನಿರಂತರ ಅಧ್ಯಯನದಿಂದ ಮಾತ್ರ ವಕೀಲ ವೃತ್ತಿಯಲ್ಲಿ ಯಶಸ್ಸು ಗಳಿಸಲು ಸಾಧ್ಯ ಎಂದು ಕರ್ನಾಟಕ ರಾಜ್ಯ ಪಂಚಾಯತ್‌ರಾಜ್ ಮತ್ತು ಗ್ರಾಮೀಣ ಅಭಿವೃದ್ಧಿಯ ಉಪ ಕುಲಪತಿ(ಆಕ್ಟಿಂಗ್) ಪ್ರೊ.ಸುರೇಶ್ ವಿ.ನಾಡಗೌಡರ್ ಕರೆ ನೀಡಿದರು.

ಸರಸ್ವತಿ ಕಾನೂನು ಕಾಲೇಜಿನಲ್ಲಿ ಎರಡು ದಿನಗಳ ಕಾಲ ನಡೆದ 2 ನೇ ರಾಷ್ಟ್ರೀಯ ಕಲ್ಪಿತ ನ್ಯಾಯಾಲಯ ಸ್ಪರ್ಧೆಯ ಸಮಾರೋಪ ಸಮಾರಂಭದಲ್ಲಿ ವಿಜೇತರಿಗೆ ಬಹುಮಾನಗಳನ್ನು ವಿತರಿಸಿ ಮಾತನಾಡಿದರು.

ಕಾನೂನು ವಿದ್ಯಾರ್ಥಿಗಳು ಕಲ್ಪಿತ ನ್ಯಾಯಾಲಯ ಸ್ಪರ್ಧೆಯಲ್ಲಿ ಭಾಗವಹಿಸುವುದು ಮುಖ್ಯ. ಗ್ರಾಮೀಣ ಭಾಗದಿಂದ ಬಂದವರು ಇಂಗ್ಲಿಷ್ ಲಾಂಗ್ವೇಜ್ ಇಲ್ಲ ಎನ್ನುವ ಕೀಳರಿಮೆ ಬೇಡ. ವಕೀಲ ವೃತ್ತಿ ಅತ್ಯಂತ ಪವಿತ್ರವಾದುದು. ನಿಮ್ಮ ಬಳಿ ಬರುವ ಕಕ್ಷಿದಾರರಿಗೆ ನ್ಯಾಯ




ಒದಗಿಸುವ ಮಹತ್ತರ ಜವಾಬ್ದಾರಿ ನಿಮ್ಮ ಮೇಲಿದೆ. ಎರಡು ಮೂರು ವರ್ಷವಾದರೂ ಟ್ರಯಲ್ ಕೋರ್ಟ್‌ನಲ್ಲಿ ಪ್ರಾಕ್ಟೀಸ್ ಮಾಡಿದರೆ ಬೇಸಿಕ್ ನಾಲೆಡ್ಜ್ ಸಿಗುತ್ತದೆ ಎಂದು ಹೇಳಿದರು.

ಕಲ್ಪಿತ ನ್ಯಾಯಾಲಯ ಸ್ಪರ್ಧೆ ಕಾನೂನು ವಿದ್ಯಾರ್ಥಿಗಳಿಗೆ ಅರ್ಥಪೂರ್ಣ ಹಾಗೂ ಪರಿಣಾಮಕಾರಿಯಾದುದು. ಚಿತ್ರದುರ್ಗದ ಸರಸ್ವತಿಕಾನೂನುಕಾಲೇಜಿಗೆಇತಿಹಾಸವಿದೆ. ಇಲ್ಲಿ ಕಾನೂನು ಪದವಿ ಪಡೆದವರಲ್ಲಿ ಮೂವರು ನ್ಯಾಯಾಧೀಶರುಗಳಾಗಿದ್ದಾರೆ. ನಲವತ್ತು ಮಂದಿ ನ್ಯಾಯಾಂಗ ಇಲಾಖೆಯಲ್ಲಿ ಅಧಿಕಾರಿಗಳಾಗಿದ್ದಾರೆ. ಸರ್ಕಾರಿ ಅಭಿಯೋಜಕರು ಹಾಗೂ ಸಾವಿರಾರು ವಕೀಲರುಗಳನ್ನು ಸಮಾಜಕ್ಕೆ ಕೊಟ್ಟಿದೆ. ಕಾನೂನು ಪದವಿ ಪಡೆದವರು ವಕೀಲರುಗಳೆ ಆಗಬೇಕೆಂದಿಲ್ಲ. ವಿಫುಲ ಅವಕಾಶಗಳಿವೆ. ಐ.ಎ.ಎಸ್. ಕೆ.ಎ.ಎಸ್. ಅಧಿಕಾರಿಗಳಾಗಬಹುದು. ಸಿವಿಲ್ ಸರ್ವಿಸ್‌ಗೆ ಸೇರಿ ಉತ್ತಮ ಆಡಳಿತ ನೀಡಬಹುದು. ನ್ಯಾಯವಾದಿಗಳಿಗೆ ಸಂವಹನ ಕೌಶಲ್ಯವಿರಬೇಕು. ತಂತ್ರಜ್ಞಾನಕ್ಕೆ ತಕ್ಕಂತೆ ಹೊಂದಿಕೊಳ್ಳಬೇಕು. ಸೋಲು–ಗೆಲುವಿಗಿಂತ ಸ್ಪರ್ಧೆಯಲ್ಲಿ ಭಾಗವಹಿಸುವುದು ಮುಖ್ಯ ಎಂದು ಕಾನೂನು ವಿದ್ಯಾರ್ಥಿಗಳಿಗೆ ತಿಳಿಸಿದರು.

ಸರಸ್ವತಿ ಕಾನೂನು ಕಾಲೇಜಿನ ಕಾರ್ಯದರ್ಶಿ ಹಾಗೂ ನ್ಯಾಯವಾದಿ ಡಿ.ಕೆ.ಶೀಲಾ ಮಾತನಾಡಿ ಬೇರೆ ಯಾವ ವೃತ್ತಿಯಲ್ಲಿಯೂ ಇಂತಹ ಸ್ಪರ್ಧೆಗಳು ಇರುವುದಿಲ್ಲ. ಕಲ್ಪಿತ ನ್ಯಾಯಾಲಯ ಸ್ಪರ್ಧೆಯಲ್ಲಿ ಸೋಲು–ಗೆಲುವಿಗಿಂತಲೂ ಭಾಗವಹಿಸುವಿಕೆಮುಖ್ಯ.ವಕೀಲವೃತ್ತಿಯಲ್ಲಿ ಹೆಣ್ಣು ಮಕ್ಕಳು ಕಡಿಮೆಯಾಗುತ್ತಿದ್ದಾರೆ. ಮುಂದಿನದಿನಗಳಲ್ಲಿಜಾಸ್ತಿಯಾಗಬಹುದು. ಬದ್ದತೆ, ಪರಿಶ್ರಮ, ನಿರಂತರ ಅಧ್ಯಯನ ವಕೀಲ ವೃತ್ತಿಗೆ ಅತ್ಯವಶ್ಯಕ. ಇಲ್ಲದಿದ್ದರೆ ಹೆಸರು ಗಳಿಸುವುದು ಕಷ್ಟವಾಗುತ್ತದೆ ಎಂದು ಹೇಳಿದರು.ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಸರಸ್ವತಿ ಕಾನೂನು ಕಾಲೇಜು ಅಧ್ಯಕ್ಷರಾದ ಹೆಚ್. ಹನುಮಂತಪ್ಪ ಮಾತನಾಡಿ ಕಲ್ಪಿತ ನ್ಯಾಯಾಲಯ ಸ್ಪರ್ಧೆಯಲ್ಲಿ ರಾಜ್ಯದ ವಿವಿಧ ಕಾಲೇಜುಗಳಿಂದ 102 ವಿದ್ಯಾರ್ಥಿಗಳು ಭಾಗವಹಿಸಿರುವುದು ಅತ್ಯಂತ ಸಂತೋಷ. ಬಹುಮಾನ ಪಡೆಯುವುದು ಮುಖ್ಯವಲ್ಲ. ಸ್ಪರ್ಧೆಯಲ್ಲಿ ಭಾಗವಹಿಸಿದರೆ ಜ್ಞಾನ ಬೆಳೆಯುತ್ತದೆ. ಸರಸ್ವತಿ ಕಾನೂನು ಕಾಲೇಜಿನ ಬೆಳವಣಿಗೆಯ ಹಿಂದೆ ಎಲ್ಲರ ಶ್ರಮವಿದೆ ಎಂದು ಗುಣಗಾನ ಮಾಡಿದರು.ಸರಸ್ವತಿ ಕಾನೂನು ಕಾಲೇಜು ಪ್ರಾಂಶುಪಾಲರಾದ ಪ್ರೊ.ಎಂ.ಎಸ್.ಸುಧಾದೇವಿ ಮಾತನಾಡುತ್ತ ಸ್ಪರ್ಧೆಯನ್ನು ಸ್ಪೋರ್ಟಿವ್ ಆಗಿ ತೆಗೆದುಕೊಳ್ಳಬೇಕು. ಕಲ್ಪಿತ ನ್ಯಾಯಾಲಯ ಸ್ಪರ್ಧೆಯಲ್ಲಿ ಸೋತವರು ಮುಂದೆ ಗೆಲ್ಲುವ ಛಲವಿಟ್ಟುಕೊಳ್ಳಿ ಎಂದು ಕಾನೂನು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಸರಸ್ವತಿ ಕಾನೂನು ಕಾಲೇಜು ಉಪಾಧ್ಯಕ್ಷ ಹಿರಿಯ ನ್ಯಾಯವಾದಿ ಫಾತ್ಯರಾಜನ್ ವೇದಿಕೆಯಲ್ಲಿದ್ದರು. ಅಂತಿಮ ವರ್ಷದ ಕಾನೂನು ವಿದ್ಯಾರ್ಥಿ ಆಶಾ ಹೆಚ್.ಸ್ವಾಗತಿಸಿದರು.

## ಫಾಸ್ಟ್ ನ್ಯೂಸ್

### ಆಧುನಿಕ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ

» ದಾವಣಗೆರೆ

ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಮೇ.8 ಮತ್ತು 9 ರಂದು ಆಧುನಿಕ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿಯನ್ನು ಆಯೋಜಿಸಲಾಗಿದೆ.

ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ತರಬೇತಿಯು ದಾವಣಗೆರೆ ಜಿಲ್ಲೆಯ ರೈತರಿಗೆ ಮಾತ್ರ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192–233787 ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

### ಪೌರಕಾರ್ಮಿಕರ ಹುದ್ದೆಯನ್ನು ನೀಡಲು ಅಧಿಕಾರಿ, ಸಿಬ್ಬಂದಿ ಹಣ ಪಡೆದರೇ ಶಿಸ್ತು ಕ್ರಮ

» ದಾವಣಗೆರೆ

ಮಹಾನಗರಪಾಲಿಕೆಯಲ್ಲಿ ನೇರ ನೇಮಕಾತಿ ಮಾಡಿಕೊಳ್ಳಲು ಪಾಲಿಕೆಯ ಯಾವುದೇ ಅಧಿಕಾರಿ, ಸಿಬ್ಬಂದಿಗಳು ಹಣ ನೀಡುವಂತೆ ಅಥವಾ ಒತ್ತಾಯ ಮಾಡಿರುವುದು ಇಲ್ಲಿಯವರೆಗೆ ಯಾವುದೇ ದೂರುಗಳು ಕಚೇರಿಗೆ ಸ್ವೀಕೃತಿಯಾಗಿರುವುದಿಲ್ಲ. ಒಂದು ವೇಳೆ ಪಾಲಿಕೆಯಲ್ಲಿನ ಯಾವುದೇ ಅಧಿಕಾರಿ, ಸಿಬ್ಬಂದಿಗಳು ಹಣವನ್ನು ನೀಡುವಂತೆ ಕೋರಿರುವುದು ಹಣವನ್ನು ಪಡೆದಿರುವುದು ದಾಖಲೆಗಳೊಂದಿಗೆ ನೇರವಾಗಿ ಮಹಾನಗರಪಾಲಿಕೆಯ ಆಯುಕ್ತರಿಗೆ ಖುದ್ದಾಗಿ ದೂರು ಸಲ್ಲಿಸಿದಲ್ಲಿ, ಅಂತಹವರ ವಿರುದ್ಧ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲಾಗುವುದು. ಹಾಗೇ ಮಧ್ಯವರ್ತಿಗಳು ಹಣಪಡೆದಲ್ಲಿ ಅಂತವರ ವಿರುದ್ಧ ನೇರವಾಗಿ ನ್ಯಾಯಾಲಯಕ್ಕೆ ದೂರು ದಾಖಲಿಸಬಹುದೆಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

### ಡಿಪ್ಲೋಮಾ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

» ದಾವಣಗೆರೆ

ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ ಹರಿಹರದಲ್ಲಿ ಪ್ರಸಕ್ತ ಸಾಲಿನ ಡಿಪ್ಲೋಮಾ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಡಿಪ್ಲೋಮಾ ಇನ್ ಟೂಲ್ & ಡೈ ಮೇಕಿಂಗ್, ಡಿಪ್ಲೋಮಾ ಇನ್ ಆಟೋಮೇಷನ್ & ರೊಬೋಟಿಕ್ಸ್, ಡಿಪ್ಲೋಮಾ ಇನ್ ಎಲೆಕ್ಟ್ರಿಕಲ್ & ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಮತ್ತು ಡಿಪ್ಲೋಮಾ ಇನ್ ಪ್ರಿಸಿಷನ್ ಮ್ಯಾನ್ಯುಫ್ಯಾಕ್ಚರಿಂಗ್ ಡಿಪ್ಲೋಮಾ ಕೋರ್ಸ್‌ಗಳು ಲಭ್ಯವಿದ್ದು, ಎಸ್.ಎಸ್.ಎಲ್.ಸಿ ಪಾಸಾದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಮೇ.15 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ, ಪ್ಲಾಟ್ ನಂ:22 ಸಿ& ಡಿ, ಕೆಐಎಡಿಬಿ, ಇಂಡಸ್ಟ್ರೀಯಲ್ ಏರಿಯಾ, ಹರ್ಲಾಪುರ, ಕೆ.ಎಸ್.ಆರ್.ಟಿ.ಸಿ ಡಿಪೋ ಹತ್ತಿರ ಹರಿಹರ–577602 ಒ.ಸಂ:9743185553, 9845941245 ನ್ನು ಸಂಪರ್ಕಿಸಿ.

### ಒಳಮೀಸಲಾತಿ ಸಮೀಕ್ಷೆ ಆರಂಭ: ಬೋವಿ(ವಡ್ಡರು) ಎಂದು ನಮೂದಿಸಿ



» ಚಳ್ಳಕೆರೆ

ಒಳಮೀಸಲಾತಿ ಜಾರಿ ಕುರಿತು ಸರ್ಕಾರ ಇಂದಿನಿಂದಲೇ ಸಮೀಕ್ಷಾ ಕಾರ್ಯ ಆರಂಭಿಸಿದ್ದು, ಸಮೀಕ್ಷೆಯ ಸಂದರ್ಭದಲ್ಲಿ ತಾಲ್ಲೂಕಿನಾದ್ಯಂತ ಬೋವಿ ಸಮಾಜದ ಬಂಧುಗಳು ಬೋವಿ(ವಡ್ಡರು) ಎಂದು ನಮೂದಿಸುವಂತೆ ತಾಲ್ಲೂಕು ಬೋವಿ ಸಮಾಜದ ಅಧ್ಯಕ್ಷ, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಎಚ್.ಆಂಜನೇಯ ಮನವಿ ಮಾಡಿದ್ದಾರೆ. ಸೋಮವಾರ ಪ್ರವಾಸಿಮಂದಿರದಲ್ಲಿ ಬೋವಿ ಸಮಾಜದ ಬಂಧುಗಳ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದವರು, ಈಗಾಗಲೇ ಸಮೀಕ್ಷೆ ಕುರಿತಂತೆ ಸಮಾಜದ ಎಲ್ಲಾ ಬಂಧುಗಳು ಸ್ವಾಮೀಜಿಯವರ ನೇತೃತ್ವದಲ್ಲಿ ಸಭೆ ಸೇರಿ ಚರ್ಚೆ ಮಾಡಲಾಗಿದೆ. ಬೋವಿ(ವಡ್ಡರು) ಎಂದು ನಮೂದಿಸುವಂತೆ ಮನವಿ ಮಾಡಲಾಗಿದೆ. ಆದ್ದರಿಂದ ನಿಮ್ಮ ಮನೆಗೆ ಸಮೀಕ್ಷೆಗೆ ಬರುವ ಅಧಿಕಾರಿಗಳಿಗೆ ಬೋವಿ(ವಡ್ಡರು) ಎಂದು ಕಾಲಂನಲ್ಲಿ ತಪ್ಪದೆ ನಮೂದಿಸಬೇಕು. ನಮೂದಿಸಿದ ನಂತರವೂ ಪರೀಕ್ಷಿಸಿಕೊಳ್ಳಬೇಕು ಎಂದು ತಿಳಿಸಿದರು.

**ಕಳೆದೆರಡು ವರ್ಷಗಳಲ್ಲಿ ರೂ.82 ಸಾವಿರ ಕೋಟಿ ವೆಚ್ಚ, ಯೋಜನೆ ಟೀಕೆ ಮಾಡುತ್ತಿದ್ದವರು ಅನುಷ್ಠಾನದ ಅಧ್ಯಯನ ಮಾಡುವಂತಾಗಿದೆ**

# ರಾಜ್ಯದಲ್ಲಿ ಗ್ಯಾರಂಟಿಗಳಿಂದ ಆರ್ಥಿಕಾಭಿವೃದ್ಧಿ

**ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್**

» ದಾವಣಗೆರೆ

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಿಂದ ಜನರ ಆರ್ಥಿಕಾಭಿವೃದ್ಧಿಯಾಗುತ್ತಿದ್ದು ಯೋಜನೆಗಳ ಅನುಷ್ಠಾನಕ್ಕೆ ಅಪಸ್ವರವೆತ್ತಿದವರು ರಾಜ್ಯಕ್ಕೆ ಬಂದು ಗ್ಯಾರಂಟಿ ಯೋಜನೆಗಳ ಅಧ್ಯಯನ ಮಾಡುವಂತಾಗಿದೆ ಎಂದು ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಸೋಮವಾರ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇಂಧನ, ಸಾರಿಗೆ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಗಳಿಂದ ಏರ್ಪಡಿಸಲಾದ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕಚೇರಿ ಉದ್ಘಾಟನೆ ನೆರವೇರಿಸಿ ಸಮಾರಂಭದಲ್ಲಿ ಮಾತನಾಡಿದರು.

ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವುದು ಕಷ್ಟ, ಇದರಿಂದ ಆರ್ಥಿಕ ನಷ್ಟವಾಗಿ ಬೆಳವಣಿಗೆ ಕುಂಠಿತವಾಗುತ್ತದೆ ಎಂದು ವಿರೋಧ ಪಕ್ಷದವರು ಮಾತನಾಡುತ್ತಿದ್ದರು. ಆದರೆ ಯೋಜನೆಗಳನ್ನು ಕಳೆದೆರಡು ವರ್ಷಗಳಿಂದ ಯಶಸ್ವಿಯಾಗಿ ಅನುಷ್ಠಾನ ಮಾಡಲಾಗಿದೆ. ಯಶಸ್ವಿಯಾದ ಯೋಜನೆಗಳ ಕುರಿತು ವಿವಿಧ ರಾಜ್ಯಗಳು ಕರ್ನಾಟಕಕ್ಕೆ ಬಂದು ಅಧ್ಯಯನ ಮಾಡುವಂತಾಗಿದೆ. ಪ್ರತಿ ಕುಟುಂಬಕ್ಕೆ 4 ರಿಂದ 6 ಸಾವಿರದಷ್ಟು ಯೋಜನೆಗಳ ಲಾಭ ಸಿಗುತ್ತಿರುವುದರಿಂದ ಜನರ ಜೀವನ ಮಟ್ಟ ಸುಧಾರಣೆಯಾಗಿದ್ದು ಪರೋಕ್ಷವಾಗಿ ಆರ್ಥಿಕಾಭಿವೃದ್ಧಿಯಾಗಿ ಜೀವನ ನಿರ್ವಹಣಾ ಮಟ್ಟ ಹೆಚ್ಚಳವಾಗಿದೆ ಎಂದರು.

ಪಂಚ ಗ್ಯಾರಂಟಿ ನೇರವಾಗಿ ಜನರಿಗೆ ತಲುಪುವುದರಿಂದ ಇನ್ನೂ ಪಾರದರ್ಶಕವಾಗಿ ಯೋಜನೆಗಳನ್ನು ಅನುಷ್ಠಾನ ಮಾಡಿ ಜನರಿಗೆ



ತಲುಪಿಸುವ ಕೆಲಸವನ್ನು ಸಮಿತಿಯಿಂದ ಮಾಡಬೇಕಾಗಿದೆ. ಆರ್ಥಿಕ ಸೌಲಭ್ಯ ನೀಡುವ ಗೃಹಲಕ್ಷ್ಮಿ, ಯುವನಿಧಿ ಯೋಜನೆಗಳನ್ನು ಪ್ರತಿ ತಿಂಗಳು 1 ರಿಂದ 5 ನೇ ತಾರೀಖಿನೊಳಗೆ ತಲುಪಿಸುವಂತೆ ಮಾಡಬೇಕೆಂದರು.

ಶಕ್ತಿ ಯೋಜನೆಯಡಿ ದಾವಣಗೆರೆ ಕೆಎಸ್‌ಆರ್‌ಟಿಸಿಗೆ ರೂ.213.48 ಕೋಟಿ, ಅನ್ನಭಾಗ್ಯ ಯೋಜನೆಯಡಿ 3.44 ಲಕ್ಷ ಕಾರ್ಡ್‌ದಾರರು ಹಾಗೂ 12.42 ಲಕ್ಷ ಫಲಾನುಭವಿಗಳಿಗೆ ರೂ.346 ಕೋಟಿ, ಗೃಹಜ್ಯೋತಿ ಯೋಜನೆಯಡಿ 5.03 ಲಕ್ಷ ಆರ್.ಆರ್.ಸಂಖ್ಯೆ ಹೊಂದಿದ ಕುಟುಂಬಗಳಿಗೆ ರೂ.409 ಕೋಟಿ ವಿದ್ಯುತ್ ಸಬ್ಸಿಡಿ, ಗೃಹಲಕ್ಷ್ಮಿಯಡಿ 3.6 ಲಕ್ಷ ಯಜಮಾನಿಯರಿಗೆ ರೂ.1255 ಕೋಟಿ ಮತ್ತು ಯುವನಿಧಿಯಡಿ 9094 ವಿದ್ಯಾರ್ಥಿಗಳಿಗೆ ರೂ.13 ಕೋಟಿ ನಿರುದ್ಯೋಗ ಭತ್ಯೆ ನೀಡಲಾಗಿದೆ ಎಂದರು.

ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದಅಧ್ಯಕ್ಷರಾದಹೆಚ್.ಎಂ.ರೇವಣ್ಣ ಅವರು ನೂತನ ಕಚೇರಿ ಉದ್ಘಾಟನೆಯಲ್ಲಿ ಭಾಗಿಯಾಗಿ ಸಮಾರಂಭದಲ್ಲಿ ಮಾತನಾಡಿ ರಾಜ್ಯ ಸರ್ಕಾರ ಜಾರಿಗೊಳಿಸುತ್ತಿರುವ ಪಂಚ ಗ್ಯಾರಂಟಿ ಯೋಜನೆಗಳಿಗಾಗಿ ಕಳೆದೆರಡು ವರ್ಷಗಳಲ್ಲಿ ರೂ.82 ಸಾವಿರ ಕೋಟಿ ವೆಚ್ಚ ಮಾಡಲಾಗಿದೆ. ಸರ್ಕಾರ ಯೋಜನೆಗಳನ್ನು ಬರೀ ಚುನಾವಣೆಗಾಗಿ ರೂಪಿಸಿಲ್ಲ, ಜನರ ಕಲ್ಯಾಣಕ್ಕಾಗಿ ಅನುಷ್ಠಾನ ಮಾಡುತ್ತಿದೆ. ಉಳುವವನೇ ಭೂ ಒಡೆಯ, ಪದವೀಧರರಿಗೆಸ್ಟೈಫಂಡ್,ಸಿಇಟಿಮೂಲಕ ಉನ್ನತ ವ್ಯಾಸಂಗಕ್ಕೆ ಆಯ್ಕೆ, ರೈತರಿಗೆ ಉಚಿತ ವಿದ್ಯುತ್, ಬೆಂಗಳೂರು ಐಟಿ, ಬಿಟಿ ನಗರವನ್ನಾಗಿ ಅಭಿವೃದ್ಧಿ, ಕಳೆದ ಸರ್ಕಾರದ ಅವಧಿಯಲ್ಲಿ ನೀಡಿದ 165 ಭರವಸೆಗಳಲ್ಲಿ ಎಲ್ಲವನ್ನು ಈಡೇರಿಸಲಾಗಿದೆ. ಈಗ ಕಳೆದ ಚುನಾವಣಾ ಪ್ರಣಾಳಿಕೆಯಲ್ಲಿ ನೀಡಿದಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನ ಮಾಡಿದ್ದು ಈ ಯೋಜನೆಗಳು ಮನೆ ಮಾತಾಗಿವೆ ಎಂದರು.

ಹಿಂದೆ ಗುಜರಾತ್ ಮಾದರಿ ಎಂದು ಹೇಳಲಾಗುತ್ತಿತ್ತು, ಆದರೆ ಈಗ ಕರ್ನಾಟಕ ಮಾದರಿ ಎಂದು ಹೇಳುವಂತಾಗಿದ್ದು ಅನೇಕ ರಾಜ್ಯಗಳು ನಮ್ಮ ಪಂಚ ಗ್ಯಾರಂಟಿಗಳನ್ನು ಅನುಕರಣೆ ಮಾಡುವ ನಿಟ್ಟಿನಲ್ಲಿ ಸಾಗಿವೆ. ಪಂಚ ಗ್ಯಾರಂಟಿ ಯೋಜನೆಗಳು ಮಹಿಳಾ ಸಬಲೀಕರಣಕ್ಕೆ ಒತ್ತು ನೀಡಿದೆ. ಶಕ್ತಿ ಯೋಜನೆಯಡಿ ರಾಜ್ಯದಲ್ಲಿ 450 ಕೋಟಿಯಷ್ಟು ಮಹಿಳೆಯರು ಎಲ್ಲಾ ಜಿಲ್ಲೆಗಳಿಂದ ಪ್ರಯಾಣಿಸಿದ್ದು ಇದಕ್ಕಾಗಿ ರೂ.11188 ಕೋಟಿ ವೆಚ್ಚ ಭರಿಸಲಾಗಿದೆ.

ಅನ್ನಭಾಗ್ಯ ಯೋಜನೆಯಡಿ ಕಾರ್ಡ್‌ದಾರರಿಗೆ ರೂ.11821 ಕೋಟಿ, ಗೃಹಜ್ಯೋತಿಯಡಿ 1.63 ಕೋಟಿ ಕುಟುಂಬಗಳಿಗೆ ರೂ.14950 ಕೋಟಿ, ಗೃಹಲಕ್ಷ್ಮಿಯಡಿ 1.22 ಕೋಟಿ ಯಜಮಾನಿಯರಿಗೆ ರೂ.42552 ಕೋಟಿ ಮತ್ತು ಯುವನಿಧಿಯಡಿ 2.74 ಲಕ್ಷ ನಿರುದ್ಯೋಗಿ ಪದವೀಧರರು ಮತ್ತು ಡಿಪ್ಲೊಮಾ ಪಾಸಾದ ನಿರುದ್ಯೋಗಿಗಳಿಗೆ ರೂ.326.95 ಕೋಟಿ ನಿರುದ್ಯೋಗ ಭತ್ಯೆ ನೀಡಲಾಗಿದ್ದು ಪಂಚ ಗ್ಯಾರಂಟಿ ಯೋಜನೆಗಳು ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೆ ರೂ.82000 ಕೋಟಿಯಷ್ಟು ವೆಚ್ಚ ಮಾಡಲಾಗಿದೆ. ಇದರಿಂದ ಮಹಿಳೆಯರ ಆದಾಯ ಹೆಚ್ಚಳವಾಗಿ ಕೊಡು, ಕೊಳ್ಳುವಿಕೆ ಸಾಮರ್ಥ್ಯ ಹೆಚ್ಚಿದೆ. ಯಾವುದೇ ಕಾರಣಕ್ಕೂ ಈ ಯೋಜನೆಗಳು ನಿಲ್ಲುವುದಿಲ್ಲ ಎಂದರು.

ಮಾಯಕೊಂಡ ಕ್ಷೇತ್ರದ ಶಾಸಕ ಕೆ.ಎಸ್.ಬಸವಂತಪ್ಪ ಮಾತನಾಡಿ, ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಗೃಹಜ್ಯೋತಿ, ಗೃಹಲಕ್ಷ್ಮಿ, ಅನ್ನಭಾಗ್ಯ,ಶಕ್ತಿ,ಯುವನಿಧಿ ಪಂಚಗ್ಯಾರಂಟಿ ಯೋಜನೆಗಳನ್ನು ಪ್ರಜೆಗಳ ಹಿತಕ್ಕಾಗಿ ಜಾರಿಗೊಳಿಸಲಾಗಿದ್ದು, ನಿರಂತರ 2 ವರ್ಷಗಳಿಂದ ಈ ಯೋಜನೆಯ ನೀಡುತ್ತಾ ಬಂದಿದೆ. ಇಂತಹ ಯೋಜನೆಗಳನ್ನು ಅರ್ಹ ಫಲಾನುಭವಿಗೆ ತಲುಪಿಸುವ ಸಲುವಾಗಿ ಗ್ಯಾರಂಟಿ ಯೋಜನಾ ಸಮಿತಿ ಸ್ಥಾಪಿಸಲಾಗಿದೆ. ಸರ್ಕಾರದಿಂದ ಗೃಹಲಕ್ಷ್ಮೀ ಯೋಜನೆಯಡಿ ನೀಡುವ ಹಣವನ್ನು ಯಾವುದೇ ಬ್ಯಾಂಕ್‌ಗಳು ಇತರೆ ಸಾಲಗಳಿಗೆ ಜಮಾ ಮಾಡದಂತೆ ಜಿಲ್ಲಾಧಿಕಾರಿಗಳಿಗೆ ಕ್ರಮ ವಹಿಸಬೇಕೆಂದರು.

ಹೊನ್ನಾಳಿ ಶಾಸಕ ಡಿ.ಜಿ.ಶಾಂತನಗೌಡ ಮಾತನಾಡಿ, ಗ್ಯಾರಂಟಿ ಅನುಷ್ಠಾನ ಸಮಿತಿಯಿಂದ ಯಾವುದೇ ಮಧ್ಯವರ್ತಿಗಳ ಹಾವಳಿ ಇಲ್ಲದೇ ಜಿಲ್ಲೆಯ ಪ್ರತಿಯೊಬ್ಬ ಅರ್ಹ ಫಲಾನುಭವಿಗೂ ಯೋಜನೆಗಳನ್ನು ತಲುಪಿಸುವ ಕಾರ್ಯ ಮಾಡಲಾಗುತ್ತದೆ. ರಾಜ್ಯ ಸರ್ಕಾರದ ಪಂಚಗ್ಯಾರಂಟಿ ಯೋಜನೆಗಳಿಂದ ಬಡವರು, ಮಧ್ಯಮ ವರ್ಗದ ಪ್ರತಿ ಕುಟುಂಬವೂ ಪ್ರೀತಿ, ಸಹಬಾಳ್ವೆ, ಸಾಮರಸ್ಯದಿಂದ ನೆಮ್ಮದಿಯಾಗಿ ಜೀವನ ಸಾಗಿಸುತ್ತಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ. ಜಿ.ಎಂ.ಗಂಗಾಧರಸ್ವಾಮಿ, ಜಿ.ಪಂ. ಸಿಇಓ ಸುರೇಶ್ ಬಿ.ಇಟ್ನಾಳ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಶಾಮನೂರು ಟಿ. ಬಸವರಾಜ್, ದೂಡ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ, ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಸಗೋಡು ಜಯಸಿಂಹ, ರಾಜ್ಯ ತಾಂಡ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಯದೇವನಾಯ್ಕ, ಮಾಜಿ ಮೇಯರ್ ಚಮನ್ ಸಾಬ್, ಜಿಲ್ಲಾ ಗ್ಯಾರಂಟಿ ಯೋಜನೆ ಸಮಿತಿ ಉಪಾಧ್ಯಕ್ಷರು, ಸದಸ್ಯರು ಹಾಗೂ ವಿವಿಧ ಇಲಾಖೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಪರಿಶಿಷ್ಟ ಜಾತಿಗಳ ವಿವಿಧ ಒಳಮೀಸಲಾತಿ ದತ್ತಾಂಶ ಸಮೀಕ್ಷೆ; ಮೇ 5 ರಿಂದ ಆರಂಭ

» ದಾವಣಗೆರೆ

ಪರಿಶಿಷ್ಟ ಜಾತಿ ಒಳಮೀಸಲಾತಿ ಕುರಿತಂತೆ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನದಾಸ್ ಅಧ್ಯಕ್ಷತೆಯಲ್ಲಿ ಏಕ ವ್ಯಕ್ತಿ ವಿಚಾರಣಾ ಆಯೋಗವನ್ನು ರಚಿಸಲಾಗಿದ್ದು, ಪರಿಶಿಷ್ಟ ಜಾತಿಗಳ ವಿವಿಧ ಒಳಮೀಸಲಾತಿಯನ್ನು ವರ್ಗೀಕರಿಸಿ, ಉಪವರ್ಗೀಕರಣ ಕೈಗೊಳ್ಳಲು ಅವಶ್ಯವಿರುವ ದತ್ತಾಂಶವನ್ನು ಸಂಗ್ರಹಿಸಿ ಸಮೀಕ್ಷೆಯನ್ನು ಕೈಗೊಳ್ಳಲು ಉದ್ದೇಶಿಲಾಗಿದೆ.

ಈ ಸಮೀಕ್ಷಾ ಕಾರ್ಯವನ್ನು ಮೇ. 05 ರಿಂದ 17ರವರೆಗೆ ಕೈಗೊಳ್ಳಲಾಗುತ್ತಿದ್ದು, ಸಮೀಕ್ಷಾ ಸಮಯದಲ್ಲಿ ಮನೆಮನೆಗೆ ಭೇಟಿ ನೀಡಿ ದತ್ತಾಂಶ ಸಂಗ್ರಹಿಸುವುದರಿಂದ ಈ ದಿನಾಂಕಗಳಂದು ಮನೆಯ ಹಿರಿಯ ಸದಸ್ಯರು ಹಾಜರಿದ್ದು, ಅಗತ್ಯ ದಾಖಲಾತಿಗಳೊಂದಿಗೆ ಕುಟುಂಬದ ಸಂಪೂರ್ಣ ಮಾಹಿತಿಯನ್ನು ಸಮೀಕ್ಷಾದಾರರಿಗೆ ನೀಡಿ ಸಹಕರಿಸಬೇಕು. ಮೇ.19 ರಿಂದ 21 ರವರೆಗೆ ಮತಗಟ್ಟೆ ಪ್ರದೇಶವಾರು ವಿಶೇಷ ಶಿಬಿರಗಳಲ್ಲಿ ಸಮೀಕ್ಷೆ ಕೈಗೊಳ್ಳಲಾಗುವುದು. ಮೇ.19 ರಿಂದ 23 ರವರೆಗೆ ಸ್ವಯಂ ಘೋಷಣೆ(ಆನ್ ಲೈನ್ ಮೂಲಕ) ನಡೆಸಲಾಗುವುದು.

ಸ್ವಯಂಘೋಷಣೆಗೆ ಆಧಾರ್ ನಂಬರ್ ಹಾಗೂ ಆರ್.ಡಿ ನಂಬರ್ ಕಡ್ಡಾಯವಾಗಿರುತ್ತದೆ. ಈಗಾಗಲೇ ಜಿಲ್ಲೆಯಲ್ಲಿ ಪ್ರತಿ ವಿಧಾನಸಭಾ ಕ್ಷೇತ್ರವಾರು ಸಮೀಕ್ಷಾಧಾರರು, ಮೇಲ್ವಿಚಾರಕರು, ನೋಡಲ್ ಅಧಿಕಾರಿಗಳ ವಿವರ ಇಂತಿವೆ:

ದಾವಣಗೆರೆ ದಕ್ಷಿಣ–ಸಮೀಕ್ಷೆದಾರರ ಸಂಖ್ಯೆ 217, ಮೇಲ್ವಿಚಾರಕರ ಸಂಖ್ಯೆ 22 ಒಟ್ಟು 239, ದಾವಣಗೆರೆ ಉತ್ತರ ಸಮೀಕ್ಷೆದಾರರ ಸಂಖ್ಯೆ 245, ಮೇಲ್ವಿಚಾರಕರ ಸಂಖ್ಯೆ 25, ಒಟ್ಟು 270, ಮಾಯಕೊಂಡ ಸಮೀಕ್ಷೆದಾರರ ಸಂಖ್ಯೆ 240, ಮೇಲ್ವಿಚಾರಕರ ಸಂಖ್ಯೆ 23, ಒಟ್ಟು 263, ಜಗಳೂರು ಸಮೀಕ್ಷೆದಾರರ ಸಂಖ್ಯೆ 263, ಮೇಲ್ವಿಚಾರಕರ ಸಂಖ್ಯೆ 27, ಒಟ್ಟು 290, ಹರಿಹರ ಸಮೀಕ್ಷೆದಾರರ ಸಂಖ್ಯೆ 228, ಮೇಲ್ವಿಚಾರಕರ ಸಂಖ್ಯೆ 23 ಒಟ್ಟು 251, ಹೊನ್ನಾಳಿ ಸಮೀಕ್ಷೆದಾರರ ಸಂಖ್ಯೆ 245, ಮೇಲ್ವಿಚಾರಕರ ಸಂಖ್ಯೆ 24 ಒಟ್ಟು 269, ಚನ್ನಗಿರಿ ಸಮೀಕ್ಷೆದಾರರ ಸಂಖ್ಯೆ 255, ಮೇಲ್ವಿಚಾರಕರ ಸಂಖ್ಯೆ 26, ಒಟ್ಟು 281 ಇರುತ್ತದೆ. ಮೇ 3 ರಂದು 7 ವಿಧಾನಸಭಾ ಕ್ಷೇತ್ರಗಳಲ್ಲಿ ಸಮೀಕ್ಷೆದಾರರು ಹಾಗೂ ಮೇಲ್ವಿಚಾರಕರುಗಳಿಗೆ ಈಗಾಗಲೇ ತರಬೇತಿ ನೀಡಲಾಗಿದೆ. ಗಣತಿದಾರರಿಂದ ಮನೆ–ಮನೆ ಸಮೀಕ್ಷೆ ಮುಕ್ತಾಯಗೊಂಡ ನಂತರ ಗುರುತಿಸಿರುವ ಮತಗಟ್ಟೆ ಪ್ರದೇಶದಲ್ಲಿ ವಿಶೇಷ ಶಿಬಿರಗಳನ್ನು ಆಯೋಜಿಸಲಾಗುವುದು.

ಮತಗಟ್ಟೆ ಪ್ರದೇಶದಲ್ಲಿ ಗುರುತಿಸಿಸಿರುವ ವಿಶೇಷ ಶಿಬಿರಗಳಿಗೆ ಪರಿಶಿಷ್ಟ ಜಾತಿ ಜನಾಂಗದವರು ತೆರಳಿ ಗಣತಿದಾರರಿಗೆ ಜಾತಿ ಕುರಿತು ಮಾಹಿತಿಯನ್ನು ಮೇ.19 ರಿಂದ 21 ರವರೆಗೆ ಸಲ್ಲಿಸಲು ಅವಕಾಶವಿದೆ.

ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ. ಕೊಠಡಿ ಸಂಖ್ಯೆ–37. ಜಿಲ್ಲಾಡಳಿತ ಭವನ, ಮೊದಲನೇ ಮಹಡಿ, ಬಿ. ಬ್ಲಾಕ್, ಕರೂರು ಕೈಗಾರಿಕಾ ಪ್ರದೇಶ, ದಾವಣಗೆರೆ ಇಲ್ಲಿನ ಸಹಾಯವಾಣಿ ದೂ.ಸಂ: 08192–231782ಗೆ ಸಾರ್ವಜನಿಕರು ಮತ್ತು ಸಮೀಕ್ಷಾದಾರರು, ಮೇಲ್ವಿಚಾರಕರು, ಅಧಿಕಾರಿಗಳು ಸಹಾಯವಾಣಿಗೆ ಸಂಪರ್ಕಿಸಿ ಸಮೀಕ್ಷೆಗೆ ಸಂಬಂಧಿಸಿದಂತೆ ಸಮಸ್ಯೆಗಳಿಗೆ ಪರಿಹಾರ ಪಡೆಯಬಹುದು.

ಮನೆ–ಮನೆ ಸಮೀಕ್ಷೆಗೆ ಸಮೀಕ್ಷೆದಾರರು ಆಗಮಿಸಿದಾಗ ಪರಿಶಿಷ್ಟ ಜಾತಿ ಕುಟುಂಬದವರು ರೇಷನ್ ಕಾರ್ಡ್ ನೀಡಬೇಕು. ಒಂದು ವೇಳೆ ರೇಷನ್ ಕಾರ್ಡ್ ಇಲ್ಲದಿದ್ದಲ್ಲಿ ಕೆವೈಸಿ ಆಗಿರುವಂತಹ ಆಧಾರ್ ಕಾರ್ಡ್ ನಂಬರ್ ನೀಡಬೇಕು. ಈ ಎರಡು ಇಲ್ಲದಿದ್ದಲ್ಲಿ ಆಧಾರ್ ಸೆಂಟರ್‌ಗೆ ತೆರಳಿ ಆಧಾರ್ ಕಾರ್ಡ್ ಮಾಡಿಸಿ, ಆಧಾರ್ ಎಂರೋಲ್‌ಮೆಂಟ್ ಸ್ವೀಕೃತಿ ಸಂಖ್ಯೆ ನೀಡಬೇಕು. ಹಾಗೂ ಜಾತಿ ಪ್ರಮಾಣ ಪತ್ರ ಲಭ್ಯವಿದ್ದಲ್ಲಿ ನೀಡವುದು. (ಜಾತಿ ಪ್ರಮಾಣ ಪತ್ರ ಕಡ್ಡಾಯವಾಗಿರುವುದಿಲ್ಲ) ಮನೆ–ಮನೆ ಸಮೀಕ್ಷೆಯಾದ ನಂತರ ಸ್ವಯಂ ದೃಢೀಕರಣ ಪತ್ರದಲ್ಲಿ ಮಾಹಿತಿ ನೀಡಿದ ಕುಟುಂಬದ ಮುಖ್ಯಸ್ಥರು/ಮಾಹಿತಿದಾರರ ಸಹಿ ಮಾಡಿ ನೀಡುವುದು ಮತ್ತು ಗಣತಿದಾರರ ಸಹಿ ಪಡೆಯಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ.

### ಸಂಚಾರಿ ಆರೋಗ್ಯ ಕ್ಲಿನಿಕ್ ವಾಹನಗಳಿಗೆ ಚಾಲನೆ



» ದಾವಣಗೆರೆ

ಗಣಿ ಮತ್ತು ಭೂ ವಿಜ್ಞಾನ ಮತ್ತು ತೋಟಗಾರಿಕೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್, ಮತ್ತು ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ಇಂದು ಮೇ 5 ರಂದು ಕಾರ್ಮಿಕ ಇಲಾಖೆ 3 ಸಂಚಾರಿ ಆರೋಗ್ಯ ಕ್ಲಿನಿಕ್ ವಾಹನಗಳಿಗೆ ಹಸಿರು ನಿಶಾನೆ ತೋರುವುದರ ಮೂಲಕ ಚಾಲನೆ ನೀಡಿದರು. ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿ ವತಿಯಿಂದ ನೋಂದಾಯಿತ–ಫಲಾನುಭವಿಗಳಿಗೆ ಹಾಗೂ ಅವರ ಅವಲಂಭಿತರಿಗೆ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸೆ ಒದಗಿಸುವ ಸಂಚಾರಿ ಆರೋಗ್ಯ ಕ್ಲಿನಿಕ್ ಯೋಜನೆಯನ್ನು ಅನುಷ್ಠಾನಗೊಳಿಸಲು ಮಂಡಳಿಯಿಂದ ಜಿಲ್ಲಾವಾರು ಸಂಚಾರಿ ಆರೋಗ್ಯ ಕ್ಲಿನಿಕ್ ವಾಹನಗಳನ್ನು ನೀಡಿದ್ದು ಅದರಂತೆ ದಾವಣಗೆರೆ ಜಿಲ್ಲೆಗೆ ಒಟ್ಟು 3 ಸಂಚಾರಿ ಆರೋಗ್ಯ ಕ್ಲಿನಿಕ್ ವಾಹನಗಳನ್ನು ಹಂಚಿಕೆ ಮಾಡಲಾಗಿದೆ. ಈ ಸಂಚಾರಿ ಆರೋಗ್ಯ ಕ್ಲಿನಿಕ್ ವಾಹನಗಳು ಜಿಲ್ಲೆಯಾದ್ಯಂತ ಸಂಚರಿಸಿ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಹಾಗೂ ಅವರ ಅವಲಂಬಿತರಿಗೆ ಆರೋಗ್ಯ–ತಪಾಸಣೆ ಮತ್ತು ಚಿಕಿತ್ಸೆ ಒದಗಿಸುವ ಕೆಲಸವನ್ನು ನಿರ್ವಹಿಸಲಿದೆ. ಕಾರ್ಮಿಕ ಅಧಿಕಾರಿ ಜೆ.ಇಬ್ರಾಹಿಂ ಸಾಬ್, ಕಾರ್ಮಿಕ ನಿರೀಕ್ಷಕರುಗಳಾದ ರಾಜಶೇಖರ್ ಹಿರೇಮಠ, ನಾಗೇಶ್ ಆರ್ ಹಾಗೂ ಕಾರ್ಮಿಕ ಇಲಾಖೆಯ ಸಿಬ್ಬಂದಿಗಳು ಮತ್ತು ಕಾರ್ಮಿಕ ಸಂಘಟನೆಗಳ ಪ್ರತಿನಿಧಿಗಳು ಹಾಜರಿದ್ದರು.

## ಪ್ರಮುಖ ಸುದ್ದಿ

**ಜನಸಾಮಾನ್ಯರ ಸಮಸ್ಯೆಗಳಿಗೆ ಸಕರಾತ್ಮಕ ಸ್ಪಂದನೆ: ನೂತನ ಉಪಾಧ್ಯಕ್ಷೆ ಕವಿತಾಬೋರಯ್ಯ**

# ನಗರದ ಸರ್ವತೋಮುಖ ಅಭಿವೃದ್ಧಿಗೆ ಪ್ರಾಮಾಣಿಕ ಯತ್ನ

» ಚಳ್ಳಕೆರೆ

ಚಳ್ಳಕೆರೆ ನಗರಸಭೆ ತನ್ನದೇಯಾದ ಇತಿಹಾಸವನ್ನು ಹೊಂದಿದೆ. ಕಳೆದ 1960ರ ದಶಕದಲ್ಲಿ ಪುರಸಭೆಯಾಗಿ ತನ್ನ ಕಾರ್ಯಾರಂಭಿಸಿದ ಇಂದಿನ ನಗರಸಭೆ 31 ಚುನಾಯಿತ ಸದಸ್ಯರನ್ನು ಹೊಂದಿದ್ದು, ನಗರದ 60 ಸಾವಿರ ನಾಗರೀಕರಿಗೆ ಸೌಲಭ್ಯ ಒದಗಿಸುವ ಜವಾಬ್ದಾರಿ ಹೊತ್ತಿದೆ. ಕ್ಷೇತ್ರದ ಶಾಸಕ ಟಿ.ರಘುಮುರ್ತಿ ಮಾರ್ಗದರ್ಶನದಲ್ಲಿ ನಗರದ ಸರ್ವತೋಮುಖ ಅಭಿವೃದ್ಧಿಗೆ ನನ್ನ ಅಧಿಕಾರ ಅವಧಿಯಲ್ಲಿ ಪ್ರಾಮಾಣಿಕ ಕಾರ್ಯನಿರ್ವಹಿಸುವೆ ಎಂದು ನಗರಸಭೆಯ ನೂತನ ಉಪಾಧ್ಯಕ್ಷೆ ಕವಿತಾಬೋರಯ್ಯ ತಿಳಿಸಿದರು.

ಅವರು, ಸೋಮವಾರ ಉಪಾಧ್ಯಕ್ಷರಾಗಿ ಆಯ್ಕೆಯಾದ ನಂತರ ಅಧಿಕಾರ ಸ್ವೀಕರಿಸಿ



ನೆರೆದಿದ್ದ ಪಕ್ಷದ ಕಾರ್ಯಕರ್ತರು, ಅಭಿಮಾನಿಗಳು ಹಾಗೂ ಅಧಿಕಾರಿಗಳಿಗೆ ಅಭಿನಂದಿಸಿ ಮಾತನಾಡಿದರು. ಇಂದು ಪರಿಶಿಷ್ಟ ವರ್ಗದ ಮಹಿಳೆಯಾಗಿ ನಾನು ಉಪಾಧ್ಯಕ್ಷರಾಗಿ ಕಾರ್ಯನಿರ್ವಹಿಸಲು ನನಗೆ ಸರ್ಕಾರ ಅವಕಾಶ ಮಾಡಿಕೊಟ್ಟಿದೆ. ಅಂಬೇಡ್ಕರ್‌ರವರ ಸಂವಿಧಾನ ಮಹಿಳೆಯರಿಗೆ ಹೆಚ್ಚಿನ ಸ್ವಾತಂತ್ರ್ಯ ಮತ್ತು ಅಧಿಕಾರ ನೀಡುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದೆ. ಕಳೆದ ಸುಮಾರು ನಾಲ್ಕುವರ್ಷಗಳಿಗೂ ಹೆಚ್ಚುಕಾಲ ನಗರಸಭೆ ಸದಸ್ಯರಾಗಿ ಕಾರ್ಯನಿರ್ವಹಿಸಿರುವೆ ನಗರ ಹಾಗೂ ನನ್ನ ವಾರ್ಡ್‌ನ ಸಮಸ್ಯೆ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿ ಪರಿಹರಿಸಿರುವೆ, ಉಪಾಧ್ಯಕ್ಷರಾಗಿ ಇನ್ನೂ ಹೆಚ್ಚಿನ ಸೇವೆ ಮಾಡಲು ನನಗೆ ಪಕ್ಷ ಮತ್ತು ಸರ್ಕಾರ ಅವಕಾಶ ನೀಡಿದ್ದು ಇದನ್ನು ಉತ್ತಮ ರೀತಿಯಲ್ಲಿ ಸದುಪಯೋಗ ಪಡಿಸಿಕೊಳ್ಳುವ ಭರವಸೆ ನೀಡಿದರು.

ಅಧ್ಯಕ್ಷೆ ಆರ್. ಮಂಜುಳಾಪ್ರಸನ್ನಕುಮಾರ್ ಮಾತನಾಡಿ, ಕಳೆದ ತಿಂಗಳು ನಾನು ಸಹ ನಗರಸಭೆಯ ಅಧ್ಯಕ್ಷೆಯಾಗಿ ಅಧಿಕಾರ ವಹಿಸಿಕೊಂಡಿರುವೆ. ಉಪಾಧ್ಯಕ್ಷರಾಗಿ ಕವಿತಾಬೋರಯ್ಯ ನನಗೆ ಇನ್ನೂ ಹೆಚ್ಚಿನ ಸಹಕಾರ ನೀಡಿದ್ದಲಿದ್ದಾರೆ. ಕಾರಣ ಅವರಲ್ಲಿ ಸಾರ್ವಜನಿಕರ ಕೆಲಸ ಕಾರ್ಯಗಳ ಬಗ್ಗೆ ಹೆಚ್ಚು ಸಹಾನುಭೂತಿ ಇದೆ. ನಗರಸಭೆಯ ಎಲ್ಲಾ ಸದಸ್ಯರು ಸಹ ಸಹಕಾರ ನೀಡುತ್ತಿದ್ದಾರೆ. ಪೌರಾಯುಕ್ತರು ಸೇರಿದಂತೆ ನಗರಸಭೆ ಎಲ್ಲಾ ವಿಭಾಗದ ಅಧಿಕಾರಿಗಳು ನಗರದ ಅಭಿವೃದ್ಧಿಗೆ ಕೈಜೋಡಿಸುವಂತೆ ಮನವಿ ಮಾಡಿದರು.

ನಗರಸಭಾ ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ, ಸದಸ್ಯರಾದ ಬಿ.ಟಿ.ರಮೇಶ್‌ಗೌಡ, ರಾಘವೇಂದ್ರ, ಹೊಯ್ಸಳಗೋವಿಂದ, ಸುಮಭರಮಣ್ಣ, ಸುಜಾತಪಾಲಯ್ಯ, ಪಾಲಮ್ಮ, ಜೈತುಂಬಿ, ಆರ್.ಪ್ರಸನ್ನಕುಮಾರ್, ಬೋರಯ್ಯ, ಪೌರಾಯುಕ್ತ ಜಗರೆಡ್ಡಿ, ವ್ಯವಸ್ಥಾಪಕ ಲಿಂಗರಾಜು, ಕಂದಾಯಾಧಿಕಾರಿ ಸತೀಶ್, ಆರೋಗ್ಯ ನಿರೀಕ್ಷಕರಾದ ಗಣೇಶ್, ಮಹಾಲಿಂಗಪ್ಪ, ಗೀತಾಕುಮಾರಿ, ಈ.ತಿಪ್ಪೇಸ್ವಾಮಿ, ಎಸ್.ಎಲ್.ಮಂಜಣ್ಣ, ವಿಶ್ವನಾಥ, ಓಬಳೇಶ್, ರಾಜೇಶ್, ಚೇತನ್ ಮುಂತಾದವರು ಉಪಸ್ಥಿತರಿದ್ದರು.



# ಹೊಟ್ಟೆ ಪಾಡಿನ ಕಾರ್ಮಿಕರಿಂದಲೇ ಒಂದಷ್ಟು ಮುಂದೆ ಮುಂದೆ ಚಲಿಸುತ್ತಿರುವ ದೇಶ

"ಅಣ್ಣೋ ಏನಾದ್ರು ಕೆಲ್ಸ ಇದ್ರೇ ಹೇಳು "

"ಏನ್ ಓದಿದಿಯಾ ಏನ್ ಕೆಲ್ಸ ಮಾಡ್ತೀಯಾ "

" ಅಣ್ಣೋ ಏಳನೇ ಕ್ಲಾಸು. ನೀನ್ ಏನ್ ಹೇಳಿದ್ರೂ ಆ ಕೆಲ್ಸ ಮಾಡ್ತೀನಿ "

- **" ಆಯ್ತು ಅಲ್ಲಿ ಒಂದು ಹೋಟೆಲ್ ಇದೆ. ಸಪ್ಲೈಯರ್ ಕೆಲಸ ಮಾಡಬೇಕು. ನಿಯತ್ತಾಗಿರಬೇಕು. ಗೊತ್ತಾಯ್ತ. ಸಂಬಳ ಅವರು ಎಷ್ಟು ಕೊಟ್ರೆ ಅಷ್ಟು ಇಸ್ಕೋಬೇಕು ಆ "**

- **" ಆಯ್ತಣ್ಣೋ ನೀನು ನನ್ನ ಪಾಲಿಗೆ ದೇವ್ರು ಕಣಣ್ಣ "**





ಇದು ಒಂದು ಸಾಂಕೇತಿಕ ಸಂಭಾಷಣೆಯ ತುಣುಕು ಮಾತ್ರ. ಹೋಟೆಲ್ ಇರಲಿ, ಕಟ್ಟಡ ರಸ್ತೆ ನಿರ್ಮಾಣದ ಕೆಲವು ವಿಭಾಗಗಳೇ ಇರಲಿ, ಅಂಗಡಿ ವ್ಯಾಪಾರ, ಮನೆಗೆಲಸ, ವಾಚ್ ಮನ್, ಪ್ಯಾಕಿಂಗ್, ಮೂಟೆ ಹೊರುವುದು, ಕಸ ಗುಡಿಸುವುದು ಮುಂತಾದ ಎಲ್ಲಾ ಕೆಲಸಗಳಿಗೆ ಯಾವುದೇ ತರಬೇತಿ, ತಾಂತ್ರಿಕತೆ, ಶಿಷ್ಟಾಚಾರ, ಅನುಭವ, ಅರ್ಹತೆ ಇರುವುದಿಲ್ಲ. ಹೊಟ್ಟೆ ಪಾಡೇ ಬಹುಮುಖ್ಯ.

ಗಾರ್ಮೆಂಟ್ಸ್, ಅಡುಗೆ, ವಾಹನ ಚಾಲನೆ, ದಲ್ಲಾಳಿ, ಕಚೇರಿ ಸ್ವಾಗತಕಾರ ಮತ್ತು ಸಹಾಯಕ, ಸಿನಿಮಾ ನಾಟಕ ಧಾರಾವಾಹಿ ನಿರ್ಮಾಣದ ಕೆಲವು ವಿಭಾಗಗಳು, ವಿವಿಧ ವಸ್ತುಗಳ ಸಣ್ಣ ಪುಟ್ಟ ರಿಪೇರಿ ಮತ್ತು ವರ್ಕ್ ಶಾಪ್ ಮುಂತಾದ ಕೆಲಸಗಳು ಸ್ವಲ್ಪ ತರಬೇತಿ ಸ್ವಲ್ಪ ಅನುಭವದೊಂದಿಗೆ ಹೇಗೋ ನಿರ್ವಹಿಸುತ್ತಾರೆ.

ಈ ಎಲ್ಲಾ ಕಡೆಯೂ ಬಹುತೇಕ ಹೊಟ್ಟೆ ಪಾಡು ಮುಖ್ಯವಾಗಿರುತ್ತದೆಯೇ ಹೊರತು ಆ ಕೆಲಸದ ಆಸಕ್ತಿ, ವೃತ್ತಿಪರತೆ, ಕ್ರಿಯಾತ್ಮಕತೆ ಇರುವುದಿಲ್ಲ.

ಹಾಗೆಯೇ, ಸಣ್ಣ ಪುಟ್ಟ ಹೋಟೆಲುಗಳು, ಹಣ್ಣು ತರಕಾರಿ ಬಟ್ಟೆ ಚಪ್ಪಲಿಗಳು, ಬೀಡಿ ಸಿಗರೇಟು ಕಾಂಡಿಮೆಂಟ್ಸ್ ಮುಂತಾದ ವ್ಯಾಪಾರಗಳು ಸಹ ಯಾವುದೋ ಅನಿವಾರ್ಯ ಅಥವಾ ಕೌಟುಂಬಿಕ ನಿರ್ವಹಣೆಗೆ ಅದರ ಬಗ್ಗೆ ಹೆಚ್ಚಿನ ತಿಳಿವಳಿಕೆ ಇಲ್ಲದಿದ್ದರೂ ಹಣದ ಆಸೆಯಿಂದ ನಿರ್ವಹಿಸುತ್ತಾರೆ.

ಇಲ್ಲಿ ಎಲ್ಲಿಯೂ ನಿರ್ದಿಷ್ಟ ವಿದ್ಯಾರ್ಹತೆ, ವೃತ್ತಿಪರತೆ, ಆ ಕೆಲಸಗಳ ಮೇಲಿನ ಸಂಪೂರ್ಣ ನಿಯಂತ್ರಣ ಇರುವುದಿಲ್ಲ.

ಇದು ವೈಯಕ್ತಿಕ ವಿಷಯವಾದರೆ ಸಮಾಜದ ಮನಸ್ಥಿತಿ ಇನ್ನೂ ವಿಚಿತ್ರ. ಬಹಿರಂಗವಾಗಿ ಹೇಳುವುದು ಮಾತ್ರ ಯಾವ ಕೆಲಸವೂ ಮೇಲು ಕೀಳಲ್ಲ ಎಲ್ಲವೂ ಅದರದೇ ಪಾವಿತ್ರ್ಯತೆ ಹೊಂದಿದೆ. ಆದರೆ ಡಾಕ್ಟರ್ ಗೆ ಕೊಡುವ ಗೌರವ ಕೂಲಿಯವರಿಗೆ ಕೊಡುವುದಿಲ್ಲ, ವಕೀಲರಿಗೆ ಕೊಡುವ ಗೌರವ ಬಟ್ಟೆ ಇಸ್ತ್ರಿ ಮಾಡುವವರಿಗೆ ಕೊಡುವುದಿಲ್ಲ, ಶಿಕ್ಷಕರಿಗೆ ಕೊಡುವ ಗೌರವ ಚಪ್ಪಲಿ ಹೊಲೆಯುವವರಿಗೆ ಕೊಡುವುದಿಲ್ಲ, ಪೋಲಿಸರಿಗೆ ಕೊಡುವ ಗೌರವ ಬಟ್ಟೆ ಹೊಲಿಯುವವರಿಗೆ ಕೊಡುವುದಿಲ್ಲ, ಸೂಟು ಬೂಟಿನವರಿಗೆ ಕೊಡುವ ಗೌರವ ಪಂಚೆ ಕುರ್ತಾ ಅಥವಾ ಚಡ್ಡಿ ಬನಿಯನ್ ತೊಟ್ಟಿರುವ ರೈತರಿಗೆ ಕೊಡುವುದಿಲ್ಲ. ಧರ್ಮಾಧಿಕಾರಿಗಳಿಗೆ ಕೊಡುವ ಗೌರವ ಮನೆಗೆಲಸದವರಿಗೆ ಕೊಡುವುದಿಲ್ಲ. ಕಾರಿನಲ್ಲಿ ಓಡಾಡುವವರಿಗೆ ಕೊಡುವ ಮರ್ಯಾದೆ ಸೈಕಲ್ಲು ಬಸ್ಸಿನಲ್ಲಿ ಓಡಾಡುವವರಿಗೆ ಕೊಡುವುದಿಲ್ಲ. ಏಕೆ ಈ ಆತ್ಮವಂಚನೆ. ವೃತ್ತಿ ಏನೇ ಆಗಿರಲಿ ಮನುಷ್ಯ ಒಂದೇ ಅಲ್ಲವೇ, ಅರ್ಹತೆ, ಸಂಬಳ, ನಿಪುಣತೆ ಏನೇ ಇರಲಿ ವ್ಯಕ್ತಿ ಗೌರವ ಒಂದೇ ಇರಬೇಕಲ್ಲವೇ ?

ಇದು ಎಲ್ಲರ ಮನಸ್ಸಿನಲ್ಲೂ ಇರುವುದರಿಂದಲೇ ಕೆಲಸಗಳಲ್ಲೂ ಸಹ ಮೇಲು ಕೀಳು ಸೃಷ್ಟಿಯಾಗಿದೆ.

ಇನ್ನು ನಿರುದ್ಯೋಗ ಹೆಚ್ಚಾದಂತೆ ಓದಿಗೂ ವೃತ್ತಿಗೂ ಸಂಬಂಧವೇ ಇಲ್ಲದ ಹೊಟ್ಟೆ ಪಾಡಿಗಾಗಿ ಕಾಟಾಚಾರಕ್ಕೆ ತಾತ್ಕಾಲಿಕವಾಗಿ ಯಾವ ಯಾವುದೋ ಕೆಲಸಗಳನ್ನು ಮಾಡುವ ಮತ್ತೊಂದು ವರ್ಗವೂ ಇದೆ. ಸ್ನಾತಕೋತ್ತರ ಪದವೀಧರರು ಸೇಲ್ಸ್ ಮನ್ ಆಗಿ ಬಟ್ಟೆ ಚಪ್ಪಲಿ ಅಂಗಡಿಗಳಲ್ಲಿ, ಸಿನಿಮಾ ಟಿಕೆಟ್ ಕೌಂಟರಿನಲ್ಲಿ ಅಥವಾ ಇನ್ನೂ ಕೆಳ ಹಂತದಲ್ಲಿ ಕೆಲಸ ಮಾಡುವುದು ಒಂದು ಕಡೆ,

ಹತ್ತನೇ ತರಗತಿ ಫೇಲ್ ಆದವರು ದುಡ್ಡಿನ ಬಲದಿಂದ ದೊಡ್ಡ ದೊಡ್ಡ ಶಿಕ್ಷಣ ಸಂಸ್ಥೆಗಳನ್ನು ತೆರೆದು ಅದಕ್ಕೆ ಡಾಕ್ಟರೇಟ್ ಪಡೆದವರನ್ನು ಸಹಾಯಕರಾಗಿ ನೇಮಿಸಿಕೊಂಡು ಅವರಿಗೇ ಪಾಠ ಹೇಳಿಕೊಡುವ ವಿಚಿತ್ರ ಸನ್ನಿವೇಶಗಳು ಇನ್ನೊಂದು ಕಡೆ ಸಹ ಈ ವ್ಯವಸ್ಥೆಯಲ್ಲಿದೆ.

ವೃತ್ತಿ ಪರತೆ, ವೃತ್ತಿ ನೈಪುಣ್ಯತೆ, ತಮಗೆ ಅತ್ಯಂತ ಸಂತೋಷಕರ ವೃತ್ತಿ, ತಮ್ಮ ಸಾಧನೆಯ ಗುರಿ ಹೊಂದಿರುವ ವೃತ್ತಿ ಸಿಗುವುದು ತುಂಬಾ ಅಪರೂಪ.

ನಮ್ಮ ವ್ಯಕ್ತಿತ್ವ ನಾವು ಮಾಡುವ ಕೆಲಸದಲ್ಲಿ ಉಪಯೋಗಕ್ಕೆ ಬಂದರೆ ಅದು ಹೆಚ್ಚು ಪರಿಣಾಮಕಾರಿಯಾಗಿರುತ್ತದೆ. ಹೊಟ್ಟೆ ಪಾಡಿಗೆ ಮಾಡುವಾಗ ನಿರಾಸಕ್ತಿ, ಅಸಹನೆ, ಬೇಜವಾಬ್ದಾರಿ, ಕಾಮ್ ಚೋರ್ ಸ್ವಭಾವ ಮುಂತಾದ ಗುಣಲಕ್ಷಣಗಳು ಅದರ ಗುಣಮಟ್ಟವನ್ನೇ ಕುಗ್ಗಿಸುತ್ತದೆ. ಇದು ದೇಶದ ಒಟ್ಟು ಉತ್ಪನ್ನಗಳು ಮತ್ತು ಸೇವೆಗಳ ತೃಪ್ತಿದಾಯಕ ಮಟ್ಟ ಮುಟ್ಟದಿರಲು ಕಾರಣವಾಗಿದೆ.

ತಳಮಟ್ಟದಲ್ಲಿ ಬಹಳಷ್ಟು ಯುವಕರನ್ನು ನೋಡಿದ್ದೇನೆ. ಭವಿಷ್ಯದಲ್ಲಿ ಹಲವಾರು ಸಾಧನೆಯ ಕನಸುಗಳನ್ನು ಕಾಣುವ ಅವರು ಕೆಲವೇ ವರ್ಷಗಳಲ್ಲಿ ಯಾವುದೋ ಅನಿವಾರ್ಯತೆಗೆ ಬಲಿಯಾಗಿ ಹೊಟ್ಟೆ ಪಾಡಿಗಾಗಿ ಇನ್ನೇನೋ ಕೆಲಸವನ್ನು ಮಾಡುತ್ತಾ ನಿರಾಸೆಯಿಂದ ಬದುಕಿನ ವಿಫಲತೆಯನ್ನು ಹಳಿಯುತ್ತಾ ಜೀವನ ಮಾಡುತ್ತಿದ್ದಾರೆ.

ಚಪ್ಪಲಿ ಹೊಲೆಯುವುದು ಕನಿಷ್ಠ ಕೆಲಸವಲ್ಲದಿದ್ದರೂ ಪದವೀಧರರೊಬ್ಬರು ಅದನ್ನು ಮಾಡುವಾಗ ಅನುಭವಿಸುವ ಮಾನಸಿಕ ಹಿಂಸೆ ಅದನ್ನು ಅನುಭವಿಸುವವರೇ ಬಲ್ಲರು.

ಹೊಟ್ಟೆ ತುಂಬಿಸಿಕೊಳ್ಳುವುದು ಬಡವರ ಜೀವನದ ಧ್ಯೇಯ, ಸ್ವಂತ ಮನೆ ಕಟ್ಟಿಕೊಳ್ಳುವುದು ಮಧ್ಯಮ ವರ್ಗದವರ ಧ್ಯೇಯ, ಇನ್ನು ಸಾಧನೆಯ ಬಗ್ಗೆ ಯೋಚಿಸುವುದು ಯಾವಾಗ.....

ಈ ಸಂದರ್ಭದಲ್ಲಿ ನಮ್ಮ ಇಡೀ ಸಮಾಜ ಈ ನಿಟ್ಟಿನಲ್ಲಿ ಯೋಚಿಸಿ ಕ್ರಾಂತಿಕಾರಕ ಬದಲಾವಣೆಗಳನ್ನು ತರಲು ಪ್ರಯತ್ನಿಸಲಿ ಎಂದು ಆಶಿಸುತ್ತಾ.......



■ ಲೇಖನ
ವಿವೇಕಾನಂದ.
ಹೆಚ್.ಕೆ.
9844013068

# ಶಾರದಾಶ್ರಮ: ದೇವರ ಎತ್ತುಗಳಿಗೆ ಉಚಿತ ಮೇವು ವಿತರಿಸಿ ಬಸವ ಜಯಂತಿ ಆಚರಣೆ



» **ಚಳ್ಳಕೆರೆ**
ನಗರದ ಶಾರದಾಶ್ರಮದ ಭಕ್ತರು ಈ ವರ್ಷದ ಬಸವ ಜಯಂತಿ ಕಾರ್ಯಕ್ರಮವನ್ನು ವೈಶಿಷ್ಟಮಯವಾಗಿ ಆಚರಿಸಿದ್ದಾರೆ. ಅನಗತ್ಯವಾಗಿ ಹಣ ವೆಚ್ಚಮಾಡುವ ಬದಲು ದೇವರ ಎತ್ತುಗಳಿಗೆ ಮೇವು ಖರೀದಿಸಿ ನೀಡುವ ಮೂಲಕ ಬಸವಜಯಂತಿ ಕಾರ್ಯಕ್ರಮವನ್ನು ಸಂಭ್ರಮಿಸಿದ್ದಾರೆ.

ದೇವರ ಎತ್ತುಗಳ ಮೇಲ್ವಿಚಾಕರ ಸಿ.ಪಿ.ಮಹೇಶ್‌ಕುಮಾರ್, ಶಾರದಾಶ್ರಮದ ಭಕ್ತರು ನೀಡಿದ ಹುಲ್ಲು ಸ್ವೀಕರಿಸಿ ದೇವರ ಎತ್ತುಗಳಿಗೆ ವಿನಿಮಯ ಮಾಡಿ ಶಾರದಾಶ್ರಮ ಭಕ್ತರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಬಸವ ಜಯಂತಿಯ ಪುಣ್ಯದಿನದಂದು ಬಸವನ ರೂಪವಾದ ದೇವರ ಎತ್ತುಗಳಿಗೆ ಹುಲ್ಲು ನೀಡಿದ್ದು ಸಂತಸ ತಂದಿದೆ ಎಂದರು. ಇದೇ ಸಂದರ್ಭದಲ್ಲಿ ಕಿಲಾರಿಗಳಿಗೆ ಸನ್ಮಾನಿಸಲಾಯಿತು. ಶಾರದಾದೇವಿ ಸತ್ಸಂಗ ಕೇಂದ್ರದ ಮುಖ್ಯಸ್ಥೆ ಜಿ.ಯಶೋಧ, ಪಿ.ಎಸ್.ಮಾಣಿಕ್ಯ, ಎಂ.ಗೀತ, ಜಯಮ್ಮ, ನರಸಿಂಹಮೂರ್ತಿ, ಎಂ.ಯತೀಶ್, ಸುಂದರೇಶ್, ಬೋರಯ್ಯ, ಕಿಲಾರಿಶಿವಕುಮಾರ್, ಶಿವಮೂರ್ತಿ, ಪಾಲಯ್ಯ ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T